ಸಂಪುಟ 01 | ಸಂಚಿಕೆ 200 | ಮಂಗಳವಾರ 16 ಜೂನ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1). ವಿಶ್ವ ಸಮುದ್ರ ಆಮೆಗಳ ದಿನ: ಆಮೆಗಳ ಸಂರಕ್ಷಣೆ ಮತ್ತು ಅವುಗಳ ಪ್ರಾಮುಖ್ಯತೆಯ ಬಗ್ಗೆ ಜಾಗೃತಿ ಮೂಡಿಸಲು ಆಚ-ರಿಸಲಾಗುತ್ತದೆ.

2) ಬ್ಲೂಮ್ಸ್‌ಡೇ (Bloomsday): ಪ್ರಸಿದ್ಧ ಐರ್ಲೆಂಡ್ ಲೇಖಕ ಜೇಮ್ಸ್ ಜಾಯ್ಸ್ ಅವರ ನೆನಪಿಗಾಗಿ ಸಾಹಿತ್ಯಕವಾಗಿ ಆಚ-ರಿಸಲಾಗುವ ವಿಶೇಷ ದಿನ.

3) ಅಂತರಾಷ್ಟ್ರೀಯ ಕೌಟುಂಬಿಕ ಹಣ ರವಾನೆ ದಿನ
ಪ್ರತಿ ವರ್ಷ ಜೂನ್ 16 ರಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ವಿದೇಶಗಳಲ್ಲಿ ದುಡಿಯುತ್ತಿರುವ ವಲಸಿಗ ಕಾರ್ಮಿಕರು ತಮ್ಮ ತಾಯ್ನಾಡಿನಲ್ಲಿರುವ ಕುಟುಂಬ ಸದಸ್ಯರಿಗೆ ಕಳುಹಿಸುವ ಆರ್ಥಿಕ ನೆರವು ಮತ್ತು ಅವರ ತ್ಯಾಗವನ್ನು ಗುರುತಿಸಲು ವಿಶ್ವಸಂಸ್ಥೆಯು (UN) ಈ ದಿನವನ್ನು ಅಧಿಕೃತವಾಗಿ ಜಾರಿಗೆ ತಂದಿದೆ.

## ಸುಭಾಷಿತ

ಯಾರು ಅಸಹನೆಯ ವಿಚಾರದಿಂದ ಮುಕ್ತರಾಗುತ್ತಾರೋ ಅಂತಹವರಲ್ಲಿ ಶಾಂತಿ ಎನ್ನುವುದು ಸಹಜವಾಗಿಯೇ ಹುಟ್ಟುತ್ತದೆ.

–ಗೌತಮ ಬುದ್ಧ

# ಗೃಹಲಕ್ಷ್ಮೀ ಪರಿಷ್ಕರಣೆ : 3.89 ಲಕ್ಷ ಅನರ್ಹ ಲಾನುಭವಿಗಳ ಪತ್ತೆ,

# ರಾಜ್ಯ ಸರ್ಕಾರಕ್ಕೆ 77 ಕೋಟಿ ಉಳಿತಾಯ

❑ ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮೀ ಯೋಜನೆಯಲ್ಲಿ ನಡೆದ ಪರಿಷ್ಕರಣೆ ವೇಳೆ ರಾಜ್ಯಾದ್ಯಂತ ಒಟ್ಟು 3,89,784 ಅನರ್ಹ ಲಾನುಭವಿಗಳು ಪತ್ತೆಯಾಗಿದ್ದು, ಅವರ ಹೆಸರನ್ನು ಪಟ್ಟಿಯಿಂದ ಕೈಬಿಡಲಾಗಿದೆ.

ಇದರಿಂದಾಗಿ ಸರ್ಕಾರಕ್ಕೆ ತಿಂಗಳಿಗೆ ಸುಮಾರು 77 ಕೋಟಿ ಉಳಿತಾಯವಾಗಿರುವುದು ತಿಳಿದುಬಂದಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವಿವಿಧ ಸರ್ಕಾರಿ ದತ್ತಾಂಶಗಳನ್ನು ಆಧ-ರಿಸಿ ನಡೆಸಿದ ಪರಿಶೀಲನೆಯಲ್ಲಿ, ಆದಾಯ ತೆರಿಗೆ ಹಾಗೂ ಜಿಎಸ್‌ಟಿ ಪಾವತಿಸುತ್ತಿರುವ 1,94,560 ಮಂದಿ ಮತ್ತು ಮರಣ ಹೊಂದಿದ 1,95,224 ಲಾನುಭವಿಗಳ ಹೆಸರಿನಲ್ಲಿ ಸಹ ಯೋಜನೆಯ ಹಣ ಜಮೆಯಾಗುತ್ತಿದ್ದ




ಪ್ರಕರಣಗಳು ಬೆಳಕಿಗೆ ಬಂದಿವೆ. ಪರಿಷ್ಕರಣೆ ಪ್ರಕ್ರಿಯೆಯನ್ನು ಮಾರ್ಚ್ ತಿಂಗಳಲ್ಲಿ ಕೈಗೊಳ್ಳಲಾಗಿದ್ದು, ಅನರ್ಹರ ಪಟ್ಟಿಯನ್ನು ಅಂತಿಮಗೊಳಿಸಿ ಯೋಜನೆಯಿಂದ ಹೊರಗಿಡಲಾಗಿದೆ. ಸರ್ಕಾರದ ಮಾಹಿತಿ ಪ್ರಕಾರ, ಬೆಂಗಳೂರು ನಗರ ಜಿಲ್ಲೆಯಲ್ಲಿ ಅತಿ ಹೆಚ್ಚು 47,871 ಅನರ್ಹ ಲಾನುಭವಿಗಳು ಪತ್ತೆಯಾಗಿದ್ದಾರೆ. ಉಳಿದ ಜಿಲ್ಲೆಗಳಲ್ಲಿಯೂ ಸಾವಿರಾರು ಅನರ್ಹ ಲಾನುಭವಿಗಳು ಪತ್ತೆಯಾಗಿದ್ದು, ಯೋಜನೆಯ ಅರ್ಹತಾ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಇಲಾಖೆ ಮುಂದಾಗಿದೆ. ಅಧಿಕಾರಿಗಳ ಪ್ರಕಾರ, ಯೋಜನೆಯ ಸೌಲಭ್ಯ ನಿಜವಾದ ಅರ್ಹ ಮಹಿಳೆಯರಿಗೆ ತಲುಪುವ ಉದ್ದೇಶದಿಂದಲೇ ಈ ಪರಿಷ್ಕರಣೆ ಕೈಗೊಳ್ಳಲಾಗಿದೆ.

ಮುಂದಿನ ದಿನಗಳಲ್ಲಿ ಮತ್ತಷ್ಟು ದತ್ತಾಂಶ ಪರಿಶೀಲನೆ ನಡೆಸಿ ಅನರ್ಹರನ್ನು ಗುರುತಿಸುವ ಕಾರ್ಯ ಮುಂದುವರಿಯಲಿದೆ. ಒಟ್ಟಾರೆ, ಗೃಹಲಕ್ಷ್ಮೀ ಯೋಜನೆಯಲ್ಲಿ ನಡೆದ ಈ ಬೃಹತ್ ಪರಿಶೀಲನೆಯಿಂದ ಸುಮಾರು 3.89 ಲಕ್ಷ ಅನರ್ಹ ಲಾನುಭವಿಗಳು ಹೊರಬಿದ್ದಿದ್ದು, ಸರ್ಕಾರದ ವೆಚ್ಚದಲ್ಲಿ ಗಣನೀಯ ಉಳಿತಾಯವಾಗಿದೆ.

## ಶಿಕ್ಷಕ ಸಾಹೇಬಗೌಡ ಬಿರಾದಾರ ದಂಪತಿಗಳಿಗೆ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ : ಪಟ್ಟಣದ ಶ್ರೀ ನಿಮಿಷಾಂಬ ದೇವಸ್ಥಾನದಲ್ಲಿ ಎಸ್ ಕೆ ಭರತನಾಟ್ಯ ಸಂಘದಿಂದ ಆಯೋಜಿಸಿದ ಕಾರ್ಯಕ್ರಮದಲ್ಲಿ ಖ್ಯಾತ ನಿರೂಪಕ ಸಾಹಿತಿ ಶಿಕ್ಷಕ ಸಾಹೇಬಗೌಡ ಬಿರಾದಾರ ದಂಪತಿಗಳನ್ನು



ಅವರ ಸಾಹಿತ್ಯ ಕ್ಷೇತ್ರದ ಅನುಪಮ ಸೇವೆಗಾಗಿ ಸನ್ಮಾನಿಸಿ ಗೌರವಿಸಲಾಯಿತು. ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ರೈತ ಸಂಪರ್ಕ ಕೇಂದ್ರದ ಪ್ರಭಾರಿ ಕೃಷಿ ಅಧಿಕಾರಿಯಾಗಿ ಶಿವಶರಣ ಬೋವಿ ಅಧಿಕಾರ ಸ್ವೀಕಾರ



❑ ನೈಜ್ಯ ದೆಸೆ ನ್ಯೂಸ್

ಹಾಲಾಪೂರ: ತಾಲ್ಲೂಕ ಹಾಲಾಪೂರ ರೈತ ಸಂಪರ್ಕ ಕೇಂದ್ರದ ಪ್ರಭಾರಿ ಕೃಷಿ ಅಧಿಕಾರಿಯಾಗಿ ಶಿವಶರಣ ಬೋವಿ ಇಂದು ಅಧಿಕಾರ ಸ್ವೀಕರಿಸಿ ಮಾತನಾಡಿ ನನಗೆ ಈಗಾಗಲೇ ಕವಿತಾಳದಲ್ಲಿ ಖಾಯಂ ಕೃಷಿ ಅಧಿಕಾರಿಯಾಗಿ ಸೇವೆ ಮಾಡುತ್ತಿದ್ದು,ಹೆಚ್ಚುವರಿಯಾಗಿ ಹಾಲಾಪೂರಕ್ಕೆ ಮೇಲಾಧಿಕಾರಿಳು ನೇಮಿಸಿದ್ದು ,

ಅದಕ್ಕಾಗಿ ನಮ್ಮ ಕೃಷಿ ಇಲಾಖೆಯ ವಿವಿಧ ಯೋಜನೆಗಳನ್ನು ರೈತರಿಗೆ ಮುಟ್ಟಿಸುವ ಕೆಲಸ ಮಾಡಲಾಗುವುದು ಎಲ್ಲರ ಸಹಕಾರ ಅಗತ್ಯ ಎಂದು ಹೇಳಿದರು. ಹಾಗೆ ಇಲ್ಲಿಂದ ವರ್ಗಾವಣೆಗೊಂಡ ಕೃಷಿ ಅಧಿಕಾರಿ ಮಾರುತಿ ನಾಯಕ ಮಾತನಾಡಿ ನಮ್ಮ ಸಿಬ್ಬಂದಿ ಮತ್ತು ರೈತಬಾಂಧವರು ಬಹಳಷ್ಟು ಸಹಕಾರದಿಂದ ಸುಮಾರು ಮೂರು ವರ್ಷ ಕೆಲಸ ಮಾಡಲು ಸಾದ್ಯವಾಯಿತು, ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ಎಂದು ಹೇಳಿದರು. ನಂತರ ಶಿವಶರಣ ಬೋವಿ ನೂತನ ಕೃಷಿ ಅಧಿಕಾರಿಯನ್ನು ಸ್ವಾಗತ ಗೌರವಿಸಿ , ಹಾಗೂ ವರ್ಗಾವಣೆಗೊಂಡ ಕೃಷಿ ಅಧಿಕಾರಿ ಮಾರುತಿ ನಾಯಕ ಅವರನ್ನು ಬಿಳ್ಕೊಡಿಗೆ ಮಾಡಿ ಗೌರವಿಸಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ಪ್ರವೀಣಕುಮಾರ, ಮಂಜುನಾಥ-ಸ್ವಾಮಿ , ಮುದಕಪ್ಪ ,ಶರಣಪ್ಪ, ಮಾರುತಿ ಜಿನ್ನಾಪೂರ, ವಿದ್ಯಾ ಹಾಗೂ ರೈತರು ಇದ್ದರು.

## ವಿಶೇಷ ಸಮಗ್ರ ಪರಿಷ್ಕರಣೆ,ಮತದಾರರಿಗೆ ಜಾಗೃತಿ,ಶಾಲಾ ಮಕ್ಕಳಿಂದ ಜಾಥಾ

❑ ನೈಜ್ಯ ದೆಸೆ ನ್ಯೂಸ್

ಹಾಲಾಪೂರ: ಇಂದು ದೇಶಾದ್ಯಂತ ಬಹಳಷ್ಟು ಪ್ರಚಲಿತ ವಿಷಯವಾಗಿ ಎಲ್ಲರಲ್ಲೂ ಚರ್ಚೆಗೆ ಗ್ರಾಸವಾದದ್ದು ಖಖಖ ಎಂಬದು, ಚುನಾವಣಾ ಆಯೋಗ ವತಿಯಿಂದ ಮತದಾರರ ಪಟ್ಟಿಯನ್ನು ಪರಿಷ್ಕ-ರಿಸಲು ಮತ್ತು ಶುದ್ದಿಕರಿಸಲು ಕೈಗೊಂಡಿರುವ ಪ್ರಕ್ರಿಯೆ SIR ( Special Intensive Revision) ವಿಶೇಷ ಸಮಗ್ರ ಪರಿಷ್ಕರಣೆ ಇದರ ಮುಖ್ಯ ಉದ್ದೇಶವಾಗಿ ಇಂದು ಹಾಲಾಪೂರದ ನಾಡ ಕಛೇರಿ, ಗ್ರಾಮ ಪಂಚಾಯತಿ, ಶಾಲಾ ಶಿಕ್ಷಕರು ಮಕ್ಕಳಿಂದ ಪ್ರಮುಖ ಬೀದಿಗಳಲ್ಲಿ ಮತದಾರರಿಗೆ ಜಾಗೃತಿ ಜಾಥಾ ಮಾಡಲಾಯಿತು. ನಂತರ ಮುಖ್ಯ ಶಿಕ್ಷಕ ಮಂಜುನಾಥ ಹಾಲಾಪೂರ



ಮಾತನಾಡಿ ಚುನಾವಣಾ ಆಯೋಗ ವಿಶೇಷ ಶೀರ್ಷಿಕೆಯ ಅಡಿಯಲ್ಲಿ ಜಾರಿಗೆ ತಂದಿರುವ ಪ್ರಕ್ರಿಯೆಯೇ "ವಿಶೇಷ ಸಮಗ್ರ ಪರಿಷ್ಕರಣೆ ಖಖಖ" ಎಂಬ ಮತದಾರರ ಪಟ್ಟಿ ಶುದ್ದಿಕರಿಸುವುದು,ಬೂತ ಮಟ್ಟದ ಅಧಿಕಾ-ರಿಗಳು ಮನೆ ಮನೆಗೆ ಬೇಟಿ ನೀಡಿ ನಿಖರ ಮಾಹಿತಿ ಸಂಗ್ರಹ ಮಾಡಲು ಬಂದಾಗ ಸರಿಯಾಗಿ ಮಾಹಿತಿ ಕೊಟ್ಟು ಸಹಕ-ರಿಸಬೇಕು ಇದಕ್ಕೆ ಎಲ್ಲರ ಅವಶ್ಯಕತೆ ಇದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಗ್ರಾಮ ಲೆಕ್ಕಾದಿಕಾರಿ ಕೃಷ್ಣಪ್ಪ , ಗ್ರೇಡ್ ಒನ್ ಸೆಕ್ರೆಟರಿ ರಮೇಶ , ಪರಮಣ್ಣ, ಗ್ರಂಥಪಾಲಕ ಗ್ಯಾನಪ್ಪ ದೊಡ್ಡಮನಿ

## ಶ್ರೀಮತಿ ಶಕುಂಕಲಾ ಮುಖ್ಯಶಿಕ್ಷಕಿ ವಯೊನಿವೃತ್ತಿ, ಸಮಾಜಕ್ಕೆ ದೊಡ್ಡ ಸೇವೆ:ಡಾ.ರುದ್ರಗೌಡ ಪಾಟೀಲ್

❑ ನೈಜ್ಯ ದೆಸೆ ನ್ಯೂಸ್

ಲಿಂಗಸೂರು: ಪಟ್ಟಣದ ಶ್ರೀಮತಿ ಶಕುಂತಲಾ ಹನುಮಂತಪ್ಪ ಪೊ ಪಾ ಹಿರಿಯ ಮುಖ್ಯಗುರುಗಳು ಇವರು ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಗುಂತಗೋಳ ಶಾಲೆಯಲ್ಲಿ ಸೇವೆ ಸಲ್ಲಿಸಿ, ವಯೊನಿವೃತ್ತಿ ಹೊಂದಿದ ಪ್ರಯುಕ್ತ ಸನ್ಮಾನ ಮತ್ತು ಅಭಿನಂದನೆ ಕಾರ್ಯಕ್ರಮ ನಡೆಯಿತು.

ಉದ್ಘಾಟನೆಯನ್ನು ಡಾ.ರುದ್ರಗೌಡ ಪಾಟೀಲ್ ಮುಖ್ಯವೈದ್ಯಾಧಿಕಾರಿಗಳು ನೇರವೇರಿಸಿ ಮಾತನಾಡಿ ಶ್ರೀ ಮತಿ ಶಕುಂತಲಾ ಹನುಮಂತಪ್ಪ ಪೊ ಪಾ ಹಿರಿಯ ಮುಖ್ಯಶಿಕ್ಷಕಿಯವರು ಸುಧೀರ್ಘ ಮುವತ್ತು ವರ್ಷಕ್ಕೂ ಹೆಚ್ಚು ಕಾಲ ಶಿಕ್ಷಕಿಯಾಗಿ ಸೇವೆಸಲ್ಲಿಸಿ ಅಪಾರ ವಿದ್ಯಾರ್ಥಿಗಳಿಗೆ ಶಿಕ್ಷಣ ಕಲಿಸಿ ಭವಿಷ್ಯ ರೂಪಿಸಿ ಸಮಾಜಕ್ಕೆ ದೊಡ್ಡ ಸೇವೆ ಮಾಡಿದ್ದು ಹೆಮ್ಮೆಯ ವಿಚಾರ,ಶಿಕ್ಷಕ ವೃತ್ತಿ



ಪವಿತ್ರವಾದದ್ದು, ಜೊತೆಗೆ ನಮ್ಮ ಕುಟುಂಬ ಅವರ ಕುಟುಂಬ ಹಲವು ವರ್ಷಗಳ ಕಾಲ ಉತ್ತಮ ಸಂಬಂಧ ಇದೆ, ಮುಂದಿನ ತಮ್ಮ ನಿವೃತ್ತಿ ಜೀವನ ಆರೋಗ್ಯ ಸುಖ ನೆಮ್ಮದಿಯಿಂದ ಕೂಡಿರಲಿ ಎಂದು ಹೇಳಿದರು.

ನಂತರ ಶಿಕ್ಷಕರು,ಸಹೋದ್ಯೋಗಿಗಳು, ಕುಟುಂಬವರ್ಗ,ವಿದ್ಯಾರ್ಥಿಗಳಿಂದ ಸನ್ಮಾನಿಸಿ ಗೌರವಿಸಲಾಯಿತು. ಮುಖ್ಯ ಅತಿಥಿಗಳಾಗಿ ಅಮರೇಶಪ್ಪ ಹೂನೂರು ನಿವೃತ್ತ ತಹಶಿಲ್ದಾರ,ಶರಣೆಗೌಡ ಬೂದಗುಂಪ,ಶರಣಬಸವ ನಾಡಗೌಡ,ಸಂಗಪ್ಪ ದೈಹಿಕ ಶಿಕ್ಷಕರ ಸಂಘ,ಭೀಮಣ್ಣ ನಾಯಕ,ಗದ್ದೆಪ್ಪ ಪ್ರಭಾರಿ ಮುಖ್ಯಗುರು , ಹುಲಗಪ್ಪ ಮುಖ್ಯಗುರು ಹಾಗೂ ಇನ್ನೂ ಅನೇಕರು ಇದ್ದರು. ಕಾರ್ಯಕ್ರಮ ನಿರೂಪಣೆಯನ್ನು ಜಮದಗ್ನಿ ರವರು ನಡೆಸಿಕೊಟ್ಟರು.

# ಜಾಲಹಳ್ಳಿಯ ಪೊಲೀಸ್ ಠಾಣೆಯಲ್ಲಿ ಮೊಹರಂ ಹಬ್ಬದ ಶಾಂತಿ ಸಭೆ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಪೊಲೀಸ್ ಠಾಣೆಯಲ್ಲಿ ಮೊಹರಂ ಹಬ್ಬದ ಅಂಗವಾಗಿ ಶಾಂತಿ ಸಭೆ ನಡೆಯಿತು. ದೇವದುರ್ಗ ವಿಭಾಗದ ನೂತನ ಸರ್ಕಲ್ ಇನ್ಸ್‌ಪೆಕ್ಟರ್ ಪುಂಡಲಿಕ್ ಅವರ ನೇತೃತ್ವದಲ್ಲಿ ನಡೆದ ಸಭೆಯ ಅಧ್ಯಕ್ಷತೆಯನ್ನು ಪಿಎಸ್‌ಐ ವೈಶಾಲಿ ಜಳಕಿ ವಹಿಸಿದ್ದರು. ಸಭೆಯಲ್ಲಿ ಮಾತನಾಡಿದ ಪಿಎಸ್‌ಐ ವೈಶಾಲಿ ಜಳಕಿ, ಮೊಹರಂ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಸಹಬಾಳ್ವೆಯ ಮನೋಭಾವದಿಂದ ಆಚ-ರಿಸುವಂತೆ ಕರೆ ನೀಡಿದರು.

ಮುಖಂಡ ಭೂತಪ್ಪ ದೇವರಮನೆ ಮಾತನಾಡಿ, ಜಾಲಹಳ್ಳಿ ಮೊಹರಂ ಹಬ್ಬವು ಶಾಂತಿ ಮತ್ತು ಸೌಹಾರ್ದತೆಗೆ ಹೆಸರಾಗಿದ್ದು, ಹಬ್ಬದ ಸಂದರ್ಭದಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕುವಂತೆ ಮನವಿ ಮಾಡಿದರು. ಮುಖಂಡ ಶಬ್ಬೀರ್ ಜಾಲಹಳ್ಳಿ ಮಾತನಾಡಿ,



ಜಾಲಹಳ್ಳಿಯ ಮೊಹರಂ ಹಬ್ಬವು ರಾಜವಂಶಸ್ಥರಾದ ರಾಜ ರಂಗಪ್ಪ ನಾಯಕ ಅವರ ನೇತೃತ್ವದಲ್ಲಿ ನಡೆಯುವ ವಿಶಿಷ್ಟ ಆಚ-ರಣೆಯಾಗಿದ್ದು, ವತಂದಾರರು ಆಗಮಿಸಿದ ಬಳಿಕವೇ ಕಾರ್ಯಕ್ರಮಗಳು ಆರಂಭಗೊಳ್ಳುವುದು ಸಂಪ್ರದಾಯವಾಗಿದೆ ಎಂದು ತಿಳಿಸಿದರು. ಮೊಹರಂ ಕೊನೆಯ ದಿನ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಒದಗಿಸುವಂತೆ ಅವರು ಆಗ್ರಹಿಸಿದರು.

ಸರ್ಕಲ್ ಇನ್ಸ್‌ಪೆಕ್ಟರ್ ಪುಂಡಲಿಕ್ ಮಾತನಾಡಿ, ಸರ್ಕಾರದ ಮಾರ್ಗಸೂಚಿಯಂತೆ ಹಬ್ಬ ಆಚರಿಸಬೇಕು ಎಂದು ತಿಳಿಸಿದರು. ಇಮಾಮ್ ಹುಸೇನ್ ಹಾಗೂ ಅವರ ಕುಟುಂಬದವರ ತ್ಯಾಗದ ಸ್ಮರಣಾರ್ಥ ಆಚ-ರಿಸುವ ಮೊಹರಂ ಹಬ್ಬವು ಎಲ್ಲ ಧರ್ಮಗಳ ಜನರನ್ನು ಒಗ್ಗೂಡಿಸುವ ಹಬ್ಬವಾಗಿದೆ ಎಂದು ವಿವರಿಸಿದರು. ಸಾಮಾಜಿಕ ಜಾಲತಾಣಗಳ ಬಳಕೆಯಲ್ಲಿ ಯುವಕರು ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದ ಅವರು, ಅಕ್ರಮ ಮದ್ಯ ಮಾರಾಟ ನಿಯಂತ್ರಣ ಹಾಗೂ ಅಗತ್ಯ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಜಾಮಿಯಾ ಮಸೀದಿ ಅಧ್ಯಕ್ಷ ಬಾಬಾ ಮೆಡಿಕಲ್ ಮಾತನಾಡಿ, ಜಾಲಹಳ್ಳಿಯ ಮೊಹರಂ ಹಬ್ಬವು ರಾಜ ರಂಗಪ್ಪ ನಾಯಕ್ ಹಾಗೂ ಊರಿನ ವತಂದಾರರ ನೇತೃತ್ವದಲ್ಲಿ ನಡೆಯುವ ಅಪರೂಪದ ಆಚರಣೆಯಾಗಿದ್ದು, ಎಲ್ಲಾ ಸಮಾಜದವರ ಸಹಭಾಗಿತ್ವ ಗ್ರಾಮಕ್ಕೆ ವಿಶೇಷತೆ ತಂದುಕೊಟ್ಟಿದೆ ಎಂದರು. ಹಿರಿಯರಾದ ಸಾಬಣ್ಣ ಕಮಲದಿನ್ನಿ ಅವರು ನೂತನ ಸರ್ಕಲ್ ಇನ್ಸ್‌ಪೆಕ್ಟರ್ ಪುಂಡಲಿಕ್ ಅವರನ್ನು ಸ್ವಾಗತಿಸಿ, ಜಾಲಹಳ್ಳಿ ಮೊಹರಂ ಹಬ್ಬವು ಸೌಹಾರ್ದತೆ ಮತ್ತು ಸಹಬಾಳ್ವೆಯ ಸಂಕೇತವಾಗಿದೆ ಎಂದು ಹೇಳಿದರು. ಇದೇ ವೇಳೆ ಡಿಎಸ್‌ಎಸ್ ಮುಖಂಡ ಬಾಳಪ್ಪ ಸೇರಿದಂತೆ ಹಲವರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಸಭೆಯಲ್ಲಿ ಶ್ರೀದರ ದೇಸಾಯಿ, ರಾಜಾ ವಾಸುದೇವ ನಾಯಕ್, ಶಂಕರಗೌಡ ಮಾಲಿ ಪಾಟೀಲ್, ವೆಂಕೋಬ ತೋಟದ್, ರಂಗಪ್ಪ ಬಂಡಿ, ಕಲೀಮ್ ಉದ್ದಾರ, ರಮೇಶ್ ಬಾಗೂರು, ಬಾಳಪ್ಪ ಡಿಎಸ್‌ಎಸ್, ಬಾಬಾ ಮೆಡಿಕಲ್ ಯಾಸಿನ್ ಮುಲ್ಲಾ, ರಾಜ್ ಮಹಮ್ಮದ್ ಕಲೆಗಾರ, ಹೈದರ್ ಸಾಬ್ ಉದ್ದಾರ, ಹುಸೇನ್ ಭಾಷಾ ಸುರ್ನೋಬತ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವೀರೇಶ ಅರಕೇರಿ, ಸದಸ್ಯ ಮಕ್ದೂಮ್ ಪರಾಶಿ ಸೇರಿದಂತೆ ಅನೇಕ ಗಣ್ಯರು, ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಭಾಗವಹಿಸಿದ್ದರು.

## ಸಾಹಿತ್ಯ ಸಿಂಚನ

### ಸಮ್ಮತಿಸು ಇಲ್ಲ ಒಮ್ಮತಿಸು

ತಲೆ ಆಡಿಸೋ ಗೊಂಬೆ ನಾನಲ್ಲ
ಹೂಂಗುಟ್ಟೋ ಹಸುಳೆ ನಾನಲ್ಲ
ಕಣ್ಣು ಮುಚ್ಚಿ ಕುಳಿತವನಲ್ಲ
ಪ್ರಶ್ನೆ ಕೇಳದೇ ಒಪ್ಪುವವನಲ್ಲ

ಸಮ್ಮತಿಸು ಎಂದರೆ ಸರಿ ಅನಿಸಬೇಕು
ಮನಸಾಕ್ಷಿ ಹೌದೆಂದು ಹೇಳಬೇಕು
ಸುಳ್ಳಿಗೆ ಜೈ ಎನ್ನಲಾರೆ ನಾನು
ಸತ್ಯಕ್ಕೆ ತಲೆ ಬಾಗುವೆ ನಾನು

ಒಮ್ಮತಿಸು ಎಂದರೆ ಒಗ್ಗೂಡಬೇಕು
ನೂರು ಮನದ ಮಾತು ಒಂದಾಗಬೇಕು
ಬಲವಂತದ ಒಪ್ಪಿಗೆ ಬೇಡವೋ
ಭಯದ ಒಮ್ಮತ ಸಾಕು ಸಾಕೋ

ನನ್ನ ದನಿ ನನ್ನದು, ನಿನ್ನ ದನಿ ನಿನ್ನದು
ಬೇರೆ ಬೇರೆಯಾದರೂ ಚಿಂತೆಯಿಲ್ಲ
ವಾದ ಮಾಡುವೆ, ಜಗಳ ಆಡುವೆ
ಕೊನೆಗೆ ನ್ಯಾಯಕ್ಕೆ ಕೈ ಜೋಡಿಸುವೆ

ಸಮ್ಮತಿಸು ಇಲ್ಲ ಒಮ್ಮತಿಸು
ಆದರೆ ಗುಲಾಮನಾಗಬೇಡ
ಯೋಚಿಸು, ತಿಳಿ, ಆಮೇಲೆ ಹೇಳು
ನಿನ್ನ ನಿಲುವು ನಿನ್ನದೇ ಆಗಿರಲಿ

– ಎಸ್. ದುರಗಪ್ಪ.ಕುಷ್ಟಗಿ.

## ಶಾಸಕ ರಾಜುಗೌಡ ಪಾಟೀಲರಿಗೆ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ : ತಾಲೂಕಿನ ಮೈಲೇಶ್ವರ ಗ್ರಾಮದಲ್ಲಿರುವ ಬಿಲಿಯಂಟ್




ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆ ಇದರ ಆಡಳಿತ ಮಂಡಳಿ ವತಿಯಿಂದ ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಇವರನ್ನು ಇತ್ತೀಚಿಗೆ ನಡೆದ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಎನ್ ಬಿ ನಡುವಿನಮನಿ,ಉಪಾಧ್ಯಕ್ಷ ಆರ್.ಬಿ.ನಡುವಿನಮನಿ, ಕಾರ್ಯದರ್ಶಿ ಎಂ.ಬಿ. ಮಡಿವಾಳರ, ಮುಖಂಡರಾದ ಮಡಿವಾಳಪ್ಪಗೌಡ ಬಿರಾದಾರ,ರಾಜುಗೌಡ ಕೋಳೂರ ಹಾಗೂ ಸಂಸ್ಥೆಯ ನಿರ್ದೇಶಕರು ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ತೊಟ್ಟಿಲೋತ್ಸವ ಸಂಸ್ಕೃತಿಯ ಪ್ರತೀಕ: ಪ್ರಭುಲಿಂಗ ಶ್ರೀ

❑ ನೈಜ್ಯ ದೆಸೆ ನ್ಯೂಸ್



ತಾಳಿಕೋಟಿ: ಮಗು ಜನಿಸಿದಾಗ ನಡೆಸುವ ತೊಟ್ಟಿಲೋತ್ಸವ (ನಾಮಕರಣ) ಕಾರ್ಯಕ್ರಮ ಭಾರತೀಯ ಸಂಸ್ಕೃತಿಯ ಪ್ರತೀಕವಾಗಿದೆ ಎಂದು ಹಿಕ್ಕನಗುತ್ತಿ ಲಿಂಗಾಯತ ಮಹಾಮಠದ ಪೀಠಾಧಿಪತಿ ಶ್ರೀ ಮ.ನಿ.ಪ್ರ.ಪ್ರಭುಲಿಂಗ ಮಹಾಸ್ವಾಮಿಗಳು ಹೇಳಿದರು.

ಭಾನುವಾರ ಪಟ್ಟಣದ ರಾಜವಾಡೆ ಆವರಣದಲ್ಲಿ ವೀರರಾಣಿ ಕಿತ್ತೂರು ಚೆನ್ನಮ್ಮ ಪುತ್ಥಳಿ ಪ್ರತಿಷ್ಠಾಪನೆಯ ಮೂರನೇ ವಾರ್ಷಿಕೋತ್ಸವ ಅಂಗವಾಗಿ ಹಮ್ಮಿಕೊಂಡ ಪುರಾಣ ಕಾರ್ಯಕ್ರಮದಲ್ಲಿ ಚೆನ್ನಮ್ಮಳ ತೊಟ್ಟಿಲೋತ್ಸವದ ದಿವ್ಯ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು. ವೀರ ಮಹಿಳೆ ಚೆನ್ನಮ್ಮಳ ಜನನವೇ ಅತ್ಯದ್ಭುತವಾಗಿದ್ದು ಮಗುವಿನ ತೇಜಸ್ಸು ಸೂರ್ಯನ ಪ್ರಕಾಶವನ್ನು ಮಂಕಾಗಿಸುವಂತಿತ್ತು. ಮಗುವನ್ನು ನೋಡಲು ದೂರ ದೂರದ ಗ್ರಾಮಗಳಿಂದ ಜನರು ಭಾವಿಸಿ ಬರುತ್ತಿದ್ದರು. ಚೆನ್ನಮ್ಮನ ಹುಟ್ಟೂರು ಜಂಬಗಿ ಗ್ರಾಮದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಶರಣರ ಮಹಾತ್ಮರ ಮಹಾಪುರುಷರ ಹುಟ್ಟು ಮತ್ತು ಸಾವುಗಳೆರಡೂ ಅನೇಕ ವಿಸ್ಮಯ ಘಟನೆಗಳಿಂದ ಕೂಡಿರುತ್ತವೆ ಎಂದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ ನೂರಾರು ಸುಮಂಗಲೆಯರು ಕಲ್ಲದೇವನಹಳ್ಳಿಯ ಮಾನಸ ಶಿವರಾಜ್ ದಂಪತಿಗಳ ಮಗುವಿನ ಸಾಂಕೇತಿಕ ತೊಟ್ಟಿಲೋತ್ಸವವನ್ನು ಶಾಸ್ತ್ರೋತ್ಸವವಾಗಿ ನೆರವೇರಿಸಿ ಮಗುವಿಗೆ ಚೆನ್ನಮ್ಮ ಎಂದು ನಾಮಕರಣ ಮಾಡಿದರು.

ಇದೇ ಸಂದರ್ಭದಲ್ಲಿ ಪೋಲಿಸ್ ಹಾಗೂ ಗೃಹರಕ್ಷಕ ದಳದ ದಂಪತಿಗಳಿಗೆ ಮತ್ತು ಕಾರ್ಯಕ್ರಮದಲ್ಲಿ ಭರತನಾಟ್ಯವನ್ನು ಪ್ರದರ್ಶಿಸಿ ಎಲ್ಲರ ಗಮನ ಸೆಳೆದ ಮಕ್ಕಳನ್ನು ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸಮಿತಿಯ ಅಧ್ಯಕ್ಷರಾದ ನೀಲಮ್ಮಗೌಡ್ತಿ ಪಾಟೀಲ,ಗೌರವ ಅಧ್ಯಕ್ಷರಾದ ಚಂದ್ರಶೇಖರ ಸಿ.ಪಾಟೀಲ, ರೇಣುಕಾ ಬಿರಾದಾರ, ವಿದ್ಯಾ ಪಾಟೀಲ, ಕಾಶಿಬಾಯಿ ಶರಣರ, ವಿದ್ಯಾ ನಾಡಕರಣಿ, ದೇವಕ್ಕಿ ಮಾಯಾಚಾರಿ, ಶಿವಲೀಲಾ ಲಿಂಗದಳ್ಳಿ, ಲಕ್ಷ್ಮೀಬಾಯಿ ಚಳೇಕಾರ, ನಿಂಗಮ್ಮ ತಂಗಡಗಿ, ನಾಗಮ್ಮ ಪಾಟೀಲ, ನ್ಯಾಯವಾದಿ ಗುರುಪಾದ ಮಾರ್ಸನಳ್ಳಿ, ವಿಶ್ವನಾಥ ಪಾಟೀಲ, ವಿವಿಧ ಗ್ರಾಮಗಳ ಗಣ್ಯರು ಹಾಗೂ ಸಮಿತಿಯ ಪದಾಧಿಕಾರಿಗಳು ಭಾಗವಹಿಸಿದ್ದರು.

# ಮಲೇರಿಯಾ ವಿರೋಧಿ ಮಾಸಾಚರಣೆ–2026




❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರ್ ಹಾಗೂ ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಗೆ ಬರುವ ಇಂದಿರಾ ನಗರದ ನಟರಾಜ ಕಾಲೋನಿಯಲ್ಲಿ ಇರುವ ಶ್ರೀ ರಾಜೇಂದ್ರ ಮೆಮೋರಿಯಲ್ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮ ಶಾಲೆ ಸಿಂಧನೂರು ಇವರ ಸಂಯುಕ್ತ ಆಶ್ರಯದಲ್ಲಿ ಮಲೇರಿಯಾ ಮಾಸಚಾರಣೆ ಕಾರ್ಯಕ್ರಮ ಹಮ್ಮಿಕೊಳ್ಳಯಿತು.

ಘೋಷಣೆ: "ಮಲೇರಿಯ ಅಂತ್ಯಗೊಳಿಸೋಣ ಸಂಕಲ್ಪ ಮಾಡೋಣ ನಮಗಿದು ಸಾಧ್ಯವಿದೆ ನಾವು ಇದನ್ನು ಮಾಡೋಣ " ಈ ಸಂದರ್ಭದಲ್ಲಿ ಶ್ರೀಮತಿ ಗೀತಾ ಹಿರೇಮಠ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ್ ಇವರು ಮಾತನಾಡಿ ಮಲೇರಿಯಾ ಅಂತ್ಯಗೊಳಿಸಲು ಸಂಕಲ್ಪ ಮಾಡೋಣ ನಮಗಿದು ಸಾಧ್ಯವಿದೆ ನಾವು ಇದನ್ನು ಮಾಡೋಣ ಎಂದು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಹೇಳಲಾಯಿತು.

ಮಳೆಗಾಲ ಪ್ರಾರಂಭದವಾದುದ–ರಿಂದ ಸಾಂಕ್ರಾಮಿಕ ರೋಗಗಳ ಬಗ್ಗೆ ಹಾಗೂ ಶಾಲಾ ಮಕ್ಕಳೊಂದಿಗೆ ಮಲೇರಿಯಾ ಕುರಿತು ಜಾಗೃತಿ ಜಾತಾ ಮಾಡಿಸಲಾಯಿತು ಮಲೇ–ರಿಯಾ ರೋಗವು ಅನಾಫಿಲಿಸ್ ಹೆಣ್ಣು ಸೊಳ್ಳೆ ಕಚ್ಚುವಿಕೆಯಿಂದ ಮನುಷ್ಯರಿಗೆ ಹರಡುವ ಮಾರಣಾಂತಿಕ ಕಾಯಿಲೆಯಾಗಿದೆ ಹರಡುತ್ತದೆ ಪ್ಲಾಸ್ಮೊಡಿಯಂ ಎಂಬ ಪರಾವಲಂಬಿಯಿಂದ ಉಂಟಾಗುತ್ತದೆ ಮಳೆಗಾಲ ಮತ್ತು ಉಷ್ಣವಲಯದ ಪ್ರದೇಶಗಳಲ್ಲಿ ಈ ರೋಗದ ಹರಡುವಿಕೆ ಹೆಚ್ಚಾಗಿರುತ್ತದೆ ಸರಿಯಾದ ಸಮಯದಲ್ಲಿ ಚಿಕಿತ್ಸೆ ಪಡೆಯದಿದ್ದರೆ ಇದು ಜೀವಕ್ಕೆ ಅಪಾಯಕಾರಿ ಹರಡುತದೆ

ಕುರಿತು ಮತ್ತು ಸುರಕ್ಷತೆಯನ್ನು ಕಾಪಾಡಿಕೊಳ್ಳಲು ಕೆಲವು ಅತ್ಯಗತ್ಯ ಮುನ್ನೆಚ್ಚ–ರಿಕೆ ಕ್ರಮಗಳನ್ನು ತೆಗೆದುಕೊಳ್ಳುವುದು ಬಹಳ ಮುಖ್ಯ ಆರೋಗ್ಯ ರಕ್ಷಣೆ ಕಲುಷಿತ ನೀರು ಮತ್ತು ಸೊಳ್ಳೆಗಳಿಂದ ಹರಡುವ ಡೇಂಗಿ ಮಲೇರಿಯ ಟೈಫಾಡ್ ಮತ್ತು ಕಾಮಾಲೆ ಕಾಯಿಲೆಗಳ ಬಗ್ಗೆ ಎಚ್ಚರವಿರಬೇಕು ಮತ್ತು ಮನೆಯ ಸುತ್ತಮುತ್ತಲಿನ ಪರಿಸರವನ್ನು ಹಾಗೂ ನೀರು ನಿಲ್ಲದಂತೆ ನೋಡಿಕೊಳ್ಳಿ ಇದರಿಂದ ಸೊಳ್ಳೆಗಳ ಉತ್ಪತ್ತಿಯನ್ನು ತಡೆಯಬಹುದು,

ಎಲ್ಲಾ ಶಾಲೆಗಳಲ್ಲಿ ಲಾರ್ವ ಮುಕ್ತ ಆವರಣ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ, ಜವಾಬ್ದಾರಿಯಾಗಿದೆ ಯಾವುದೇ ಜ್ವರ ಬಂದರು ರಕ್ತಪರೀಕ್ಷೆಯನ್ನು ತಕ್ಷಣವೇ ಮಾಡಿಸಿಕೊಳ್ಳಬೇಕು ಸಮೀಪದ ಆರೋಗ್ಯ ಕೇಂದ್ರಗಳನ್ನ ಸಂಪರ್ಕಿಸಿ ವೈದ್ಯರ ಸಲಹೆ ಮೇರೆಗೆ ಚಿಕಿತ್ಸೆಯನ್ನು ಪಡೆದುಕೊಳ್ಳಬೇಕು ಆರೋಗ್ಯದಲ್ಲಿ ಏರುಪೇರು ಆದಾಗ ನಿರ್ಲಕ್ಷ ಮಾಡದೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಈ ಸಂದರ್ಭದಲ್ಲಿ ಶ್ರೀ ಹನುಮಂತ ಊಖಜಿ, ಶ್ರೀಮತಿ ಶಮಿನಬೇಗಂ ಕಊಅಜಿ, ಶ್ರೀ ಶಿವರಾಜ್ ಮುಖ್ಯೋಪಾಧ್ಯಾಯರು, ಶ್ರೀ ಸತೀಶ್, ಶ್ರೀಮತಿ ಲಕ್ಷ್ಮಿ, ಶ್ರೀಮತಿ ಹುಲಿಗೆಮ್ಮ, ಶಾಲಾ ಸಹಶಿಕ್ಷಕರು , ಬಾನುಬೇಗಂ, ಸೈನಜ, ಮೇರುನಿಸಾ, ವಿಜಯಲಷ್ಮಿ,ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು..

## ಕಂಪ್ಲಿ ವಿಧಾನಸಭಾ ಕ್ಷೇತ್ರದ ಕಂಪ್ಲಿ ಮಂಡಲದ ಓ.ಬಿ.ಸಿ. ಮೋರ್ಚಾದ ನೂತನ ಅಧ್ಯಕ್ಷರಾಗಿ ಬಂಡಿ ಜಡೆಪ್ಪ ನೇಮಕ

❑ ನೈಜ್ಯ ದೆಸೆ ನ್ಯೂಸ್




ಬಳ್ಳಾರಿ / ಕಂಪ್ಲಿ : ಭಾರತೀಯ ಜನತಾ ಪಾರ್ಟಿಯ ಕಂಪ್ಲಿ ವಿಧಾನಸಭಾ ಕ್ಷೇತ್ರದ ಕಂಪ್ಲಿ ಮಂಡಲದ ಓ.ಬಿ.ಸಿ. ಮೋರ್ಚಾದ ನೂತನ ಅಧ್ಯಕ್ಷರಾಗಿ ಬಂಡಿ ಜಡೆಪ್ಪ ನೇಮಕಗೊಂಡಿದ್ದಾರೆ.

ಬಿಜೆಪಿ ಪಕ್ಷದ ಸಂಘಟನೆಯನ್ನು ಸದೃಢವಾಗಿ ಮತ್ತು ಅತ್ಯಂತ ಬಲಿಷ್ಠವಾಗಿ ಕಟ್ಟಲು ನಿಮ್ಮ ಪರಿಶ್ರಮ ಅತ್ಯವಶ್ಯವಾಗಿದೆ. ಸಂಪೂರ್ಣ ಪಕ್ಷದ ಹಿತದೃಷ್ಟಿಯಿಂದ ಪಕ್ಷದ ಶಿಸ್ತು ತತ್ವ ಸಿದ್ಧಾಂತಗಳಿಗೆ ಬದ್ಧರಾಗಿ ಅವುಗಳನ್ನು ಅಳವಡಿಸಿಕೊಂಡು ಮುಂದಿನ ವರ್ಷದ ಅವಧಿಯಲ್ಲಿ ಪಕ್ಷದ ಸಂಘಟಣೆಯತ್ತ ಹೆಚ್ಚಿನ ಗಮನಹರಿಸಿ ಕಾರ್ಯಕರ್ತರಿಗೆ, ಸ್ಫೂರ್ತಿಯಾಗಿ, ಶಕ್ತಿಯಾಗಿ, ರಾಜಕೀಯವಾಗಿ, ಪಕ್ಷದ ಹಿತದೃಷ್ಟಿಯಿಂದ ಪಕ್ಷದ ಒಳಿತಿಗಾಗಿ ಪಕ್ಷದ ಸರ್ವತೋಮುಖ ಅಭಿವೃದ್ಧಿಗೆ ಪ್ರಮಾಣಿಕವಾಗಿ ಕೆಲಸ ನಿರ್ವಹಿಸಬೇಕೆಂದು ಆದೇಶದಲ್ಲಿ ಸೂಚಿಸಲಾಗಿದೆ.

ಇಲ್ಲಿನ ಕೊಟ್ಟಾಲ್ ರಸ್ತೆ ಬಳಿಯಲ್ಲಿರುವ ತುಂಗಭದ್ರ ಕಾರ್ಯಾಲಯದಲ್ಲಿ ಮಾಜಿ ಶಾಸಕ ಟಿ.ಎಚ್.ಸುರೇಶಬಾಬು ಅವರು ಆದೇಶ ಪ್ರತಿ ನೀಡಿದರು.

ನೂತನ ಅಧ್ಯಕ್ಷ ಬಂಡಿ ಜಡೆಪ್ಪ ಆದೇಶ ಪ್ರತಿ ಸ್ವೀಕರಿಸಿ ಮಾತನಾಡಿ, ಮಾಜಿ ಸಚಿವರಾದ ಬಿ. ಶ್ರೀರಾಮುಲು, ಗಂಗಾವತಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ. ಜನಾರ್ಧನ ರೆಡ್ಡಿ, ಮಾಜಿ ಶಾಸಕ ಸುರೇಶಬಾಬು, ಕಂಪ್ಲಿ ಮಂಡಲ ಅಧ್ಯಕ್ಷ ಸಿ.ಡಿ.ಮಹಾದೇವ ಹಾಗೂ ಎಲ್ಲ ಹಿರಿಯ ಬಿಜೆಪಿ ಮುಖಂಡರಿಗೂ ಅವರು ನಮ್ಮನ್ನು ಗುರುತಿಸಿ, ಕಂಪ್ಲಿ ಮಂಡಲ ಅಧ್ಯಕ್ಷರನ್ನಾಗಿ ನೇಮಕಗೊಳಿಸಿರುವುದಕ್ಕೆ ತುಂಬು ಹೃದಯದ ಕೃತಜ್ಞತೆಗಳನ್ನು ತಿಳಿಸಿದರು.

# ತಾಲೂಕ ಮಹಿಳಾ ಕನಕ ನೌಕರರ ಸಂಘದ ಪದಾಧಿಕಾರಿಗಳ ಆಯ್ಕೆ



❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಸುಕಾಲಪೇಟೆ ರಸ್ತೆಯಲ್ಲಿರುವ ತಾಲೂಕ ಕುರುಬರ ಸಂಘದ ಕಾರ್ಯಾಲದಯದಲ್ಲಿ ತಾಲೂಕ ಮಹಿಳಾ ಕನಕ ನೌಕರರ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು ಗೌರವಾಧ್ಯಕ್ಷರಾಗಿ ಸುಮಂಗಲಾ ಬಸವರಾಜ, ಅಧ್ಯಕ್ಷರಾಗಿ ರಮಾದೇವಿ ಶಂಭೋಜಿ, ಉಪಾಧ್ಯಕ್ಷರಾಗಿ ಅಂಬಮ್ಮ ಪಾಟೀಲ್, ಪ್ರಧಾನ ಕಾರ್ಯದರ್ಶಿಯಾಗಿ ಕವಿತಾ ಹೊಳಿಯಪ್ಪ, ಕೋಶಾಧ್ಯಕ್ಷರಾಗಿ ಈಶ್ವರಿ, ಸಹ ಕಾರ್ಯದರ್ಶಿಯಾಗಿ ಸಿದ್ದಮ್ಮ ಆಯ್ಕೆ ಆಗಿದ್ದಾರೆಂದು ತಾಲೂಕ ಕನಕ ನೌಕರರ ಸಂಘದ ಅಧ್ಯಕ್ಷ ಗ್ಯಾನಪ್ಪ ಕೆ. ತಿಳಿಸಿದ್ದಾರೆ.

ಚಿದಾನಂದಯ್ಯ ಗುರುವಿನ ಸಾನಿಧ್ಯ ವಹಿಸಿದ್ದರು, ಜಿಲ್ಲಾ ಕನಕ ನೌಕರರ ಸಂಘದ ಅಧ್ಯಕ್ಷ ನಾಗರಾಜ ಅರಳಿಮರ ಅಧ್ಯಕ್ಷತೆಯನ್ನು ವಹಿಸಿದ್ದರು. ಮುಖಂಡರಾದ ಅಮರೇಶಪ್ಪ ಮಲಾರ, ಬಸವರಾಜ ವಿ, ಮಲ್ಲಪ್ಪ ಬಾದರ್ಲಿ, ಹೊಳಿಯಪ್ಪ ನಾಗಲಾಪುರ, ತಾಲೂಕ ಅಧ್ಯಕ್ಷರಾದ ಗ್ಯಾನಪ್ಪ ಕೆ, ಜಿಲ್ಲಾ ಉಪಾಧ್ಯಕ್ಷರಾದ ಬಸವರಾಜ ಆನೆಗುಂದಿ, ಹನುಮಂತಪ್ಪ, ಪ್ರಧಾನ ಕಾರ್ಯದರ್ಶಿ ಸುರೇಶ ಹಚ್ಚೊಳ್ಳಿ, ಉಪಸ್ಥಿತರಿದ್ದರು.

# ಎಸ್.ಇ.ಪಿ./ಟಿ.ಎಸ್.ಪಿ. ಚೆಕ್‌ಡ್ಯಾಂ ಕಾಮಗಾರಿಗಳಲ್ಲಿ ಭಾರಿ ಅಕ್ರಮ

## ಸಮಗ್ರ ತನಿಖೆಗೆ ಆಗ್ರಹಿಸಿ 4 ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಧರಣಿ ಸತ್ಯಾಗ್ರಹಕ್ಕೆ ಕರೆ – ಬಸವರಾಜ್ ನಕ್ಕುಂಡಿ

❑ ನೈಜ್ಯ ದೆಸೆ ನ್ಯೂಸ್




ಮಾನ್ವಿ: ಮಾನ್ವಿ ಹಾಗೂ ಸಿರವಾರ ತಾಲೂಕಿನ ವ್ಯಾಪ್ತಿಯಲ್ಲಿ ಎಸ್.ಇ.ಪಿ./ಟಿ.ಎಸ್.ಪಿ. ಯೋಜನೆಯಡಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಚೆಕ್‌ಡ್ಯಾಂ ಕಾಮಗಾರಿಗಳಲ್ಲಿ ಭಾರಿ ಪ್ರಮಾಣದ ಅವ್ಯವಹಾರ, ನಿಯಮ ಉಲ್ಲಂಘನೆ ಹಾಗೂ ಸರ್ಕಾರದ ಅನುದಾನದ ದುರುಪಯೋಗ ನಡೆದಿರುವ ಆರೋಪ ಕೇಳಿಬಂದಿದ್ದು, ಈ ಕು–ರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥ ಅಧಿಕಾ–ರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಒತ್ತಾಯಿಸಿದೆ.

ಸರ್ಕಾರದ ನಿಯಮದಂತೆ ಎಸ್.ಸಿ./ ಎಸ್.ಟಿ. ರೈತರ ಜಮೀನು ಹಾಗೂ ಹಳ್ಳಗಳಲ್ಲಿ ಶೇ.100ರಷ್ಟು ಅನುದಾನದಲ್ಲಿ ಚೆಕ್‌ಡ್ಯಾಂ ನಿರ್ಮಾಣಕ್ಕೆ ಆದ್ಯತೆ ನೀಡಬೇಕಾಗಿದ್ದರೂ, ಅನೇಕ ಕಡೆಗಳಲ್ಲಿ ನಿಯಮಗಳನ್ನು ಉಲ್ಲಂಘಿಸಿ ಅರ್ಹ ಫಲಾನುಭವಿಗಳನ್ನು ಕಡೆಗಣಿಸಲಾಗಿದೆ ಎಂದು ದೂರಲಾಗಿದೆ. ಎಸ್.ಸಿ./ಎಸ್.ಟಿ. ಸಮುದಾಯದ ಅಭಿವೃದ್ಧಿಗಾಗಿ ಮೀಸಲಾದ ಅನುದಾನವನ್ನು ಉದ್ದೇಶಪೂರ್ವಕವಾಗಿ ಬೇರೆಡೆ ಬಳಸಿರುವ ಶಂಕೆಯಿದ್ದು, ಇದರಿಂದ ಸರ್ಕಾರದ ಯೋಜನೆಯ ಮೂಲ ಉದ್ದೇಶವೇ ಹಾಳಾಗಿದೆ ಎಂದು ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷರಾದ ಬಸವರಾಜ್ ನಕ್ಕುಂಡಿ ಆರೋಪಿಸಿದ್ದಾರೆ.

ಇದಲ್ಲದೆ, ಉದ್ಬಾಳ ಗ್ರಾಮದ ಸರ್ವೆ ನಂ.37/2ರ ಸರ್ಕಾರಿ ಜಮೀನಿನಲ್ಲಿ ಸಹಜ ಹಳ್ಳ ಅಥವಾ ನಾಲ್ ಇಲ್ಲದಿದ್ದರೂ ಚೆಕ್‌ಡ್ಯಾಂ ನಿರ್ಮಿಸಿ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡಿರುವ ಬಗ್ಗೆ ಆರೋಪ ಮಾಡಲಾಗಿದೆ. ಈ ಕಾಮಗಾರಿಗಳಲ್ಲಿ ಗುಣಮಟ್ಟದ ಕೊರತೆ ಹಾಗೂ ನಿಯಮಬಾಹಿರ ಕಾಮಗಾರಿ ನಡೆದಿರುವುದನ್ನೂ ಗಮನಕ್ಕೆ ತರಲಾಗಿದೆ.

ಮಾನ್ವಿ ಮತ್ತು ಸಿರವಾರ ತಾಲೂಕಿನ ವ್ಯಾಪ್ತಿಯಲ್ಲಿ ಎಸ್.ಇ.ಪಿ. ಹಾಗೂ ಇತರೆ ಯೋಜನೆಗಳಡಿ ನಿರ್ಮಿಸಲಾದ ಎಲ್ಲಾ ಚೆಕ್‌ಡ್ಯಾಂ ಕಾಮಗಾರಿಗಳ ಬಗ್ಗೆ ಉನ್ನತ ಮಟ್ಟದ ತನಿಖಾ ತಂಡ ರಚಿಸಿ ಪರಿಶೀಲನೆ ನಡೆಸಬೇಕು. ತಪ್ಪಿತಸ್ಥ ಅಧಿಕಾ–ರಿಗಳು, ಗುತ್ತಿಗೆದಾರರು ಹಾಗೂ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸಿ ಸೇವೆಯಿಂದ ಅಮಾನತು ಮಾಡಬೇಕು ಎಂದು ಸಮಿತಿಯಿಂದ ದಿನಾಂಕ 22/06/2026 ರಂದು ಸಮಗ್ರ ತನಿಖೆಗೆ ಒತ್ತಾಯಿಸಿ ಧರಣಿ ಸತ್ಯಗ್ರಹಕ್ಕೆ ಕರೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳು ಮತ್ತು ಸಂಕಲ್ಪ ಕಟ್ಟಡ ಕಾರ್ಮಿಕ ಅಧ್ಯಕ್ಷರಾದ ಪರಶುರಾಮ್ ಬಾಗಲವಾಡ, ದಲಿತ ಸಮರ ಸೇನೆ ತಾಲೂಕು ಅಧ್ಯಕ್ಷರಾದ ಅನಿಲ್ ಕುಮಾರ್, ದಲಿತ ಚಳುವಳಿ ತಾಳಿಪಾಧ್ಯಕ್ಷರಾದ ಚಂದ್ರಶೇಖರ್ ಮಾನ್ವಿ, ಲಲಿತ ಸಂಘರ್ಷ ಸಮಿತಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನರಸರೆಡ್ಡಿ, ಭೀಮಸೇನ ಕರ್ನಾಟಕ ವಿದ್ಯಾರ್ಥಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರಶಾಂತ್, ದಲಿತ ಸಂಘರ್ಷ ಸಮಿತಿ ಕಾರ್ಯದರ್ಶಿ ವೆಂಕಟೇಶ್, ಮತ್ತು ಅಂಬರೀಶ್ ಹಾಗೂ ಹನುಮೇಶ್ ಜಾಗೀರ್ ಪನ್ನೂರು ಉಪಸ್ಥಿತರಿದ್ದರು

# ನೇಮಕಾತಿ ಪ್ರಕಟಣೆ

## DHFWS ಚಿಕ್ಕಬಳ್ಳಾಪುರ ನೇಮಕಾತಿ 2026 ? 11 ಜನರಲ್ ಡ್ಯೂಟಿ ಮೆಡಿಕಲ್ ಆಫೀಸರ್ ಹುದ್ದೆಗಳಿಗೆ ವಾಕ್-ಇನ್ ಸಂದರ್ಶನ

DHFWS ಚಿಕ್ಕಬಳ್ಳಾಪುರ ನೇಮಕಾತಿ 2026: 11 ಜನರಲ್ ಡ್ಯೂಟಿ ಮೆಡಿಕಲ್ ಆಫೀಸರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಚಿಕ್ಕಬಳ್ಳಾಪುರ ಜೂನ್ 2026 ರ DHFWS ಚಿಕ್ಕಬಳ್ಳಾಪುರ ಅಧಿಕೃತ ಅಧಿಸೂಚನೆಯ ಮೂಲಕ ಜನರಲ್ ಡ್ಯೂಟಿ ಮೆಡಿಕಲ್ ಆಫೀಸರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಚಿಕ್ಕಬಳ್ಳಾಪುರ ? ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 15-ಜೂನ್-2026 ರಂದು ವಾಕ್-ಇನ್-ಇಂಟರ್ವ್ಯೂಗೆ ಹಾಜರಾಗಬಹುದು.

ಅಧಿಸೂಚನೆ ಬಿಡುಗಡೆ ದಿನಾಂಕ: 09-06-2026

ವಾಕ್-ಇನ್ ದಿನಾಂಕ: 15-ಜೂನ್-2026

ಅಧಿಕೃತ ವೆಬ್‌ಸೈಟ್: chikkaballapur.nic.in

# ನಿಧನ ವಾರ್ತೆ

ನೈಜ್ಯ ದೆಸೆ ನ್ಯೂಸ್




ತಾಳಿಕೋಟಿ: ಎಂ.ಎಚ್.ಸೌಧಾಗರ ತಾಳಿಕೋಟಿ ಪಟ್ಟಣದ ಐಡಿಯಲ್ ಉರ್ದು ಶಿಕ್ಷಣ ಸಂಸ್ಥೆ ಅಧ್ಯಕ್ಷ, ರಸ್ತೆ ಸಾರಿಗೆ ಸಂಸ್ಥೆಯ ನಿವೃತ್ತ ಚಾಲಕರಾದ ಎಂ ಎಚ್ ಸೌಧಾಗರ(91) ಸೋಮವಾರ ನಿಧನರಾದರು. ಮೃತರು ಪತ್ನಿ, ನಾಲ್ವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಅವರ ಅಂತ್ಯಕ್ರಿಯೆ ಪಟ್ಟಣದಲ್ಲಿ ಸೋಮವಾರ ಮುಂಜಾನೆ 11:00 ಘಂಟೆಗೆ ಜರುಗಿತು.

# ಎಚ್‌ಡಿಕೆ ಶಬರಿಮಲೆ ಯಾತ್ರೆ

ನೈಜ್ಯ ದೆಸೆ ನ್ಯೂಸ್

ಶಬರಿಮಲೆ: ಕೇಂದ್ರ ಸರ್ಕಾರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಶಬರಿಮಲೆ ಯಾತ್ರೆ ಕೈಗೊಂಡಿದ್ದಾರೆ. ಇಂದು ಬೆಳಗಿನ ಜಾವವೇ ಕೊಚ್ಚಿನ್ ನಗರದ ಶ್ರೀ ಸುಬ್ರಮಣ್ಯ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ಶ್ರೀ ಅಯ್ಯಪ್ಪ ಸ್ವಾಮಿ ಮಾಲೆ ಧರಿಸಿದ ಸಚಿವರು, ನಂತರ ದೇಗುಲದಲ್ಲಿಯೇ ಇರುಮುಡಿ ಒತ್ತು ಶಬರಿಮಲೆಗೆ ಯಾತ್ರೆ ಹೊರಟರು.



ಮಧ್ಯಾಹ್ನದ ಹೊತ್ತಿಗೆ ಪಂಪಾ ನದಿ ತೀರವನ್ನು ಸೇರಿಕೊಳ್ಳುವ ಸಚಿವರು ಹಾಗೂ ಅವರೊಡನೆ ತೆರಳಿರುವ ಭಕ್ತರ ತಂಡವು, ತದನಂತರ ಹಂಪಿಯಲ್ಲಿ ಪುಣ್ಯ ಸ್ನಾನ ಮಾಡಿ ಶಬರಿಮಲೆ ಅಂತ ಸಾಗಲಿದೆ. ಸಂಜೆ ಅಯ್ಯಪ್ಪ ಸನ್ನಿಧಿಯಲ್ಲಿ ಪಡಿ ಪೂಜೆಯಲ್ಲಿ ಪಾಲ್ಗೊಳ್ಳಲಿ ಸಚಿವರು ನಂತರ ಅಯ್ಯಪ್ಪ ಸ್ವಾಮಿಗೆ ಪುಷ್ಪ ಅಭಿಷೇಕ ದಲ್ಲಿ ಭಾಗಿಯಾಗಲಿದ್ದಾರೆ. ಕುಮಾರಸ್ವಾಮಿಯವರು ಕೇಂದ್ರ ಸಚಿವರಾದ ನಂತರ ಶಬರಿಮಲೆಗೆ ಕೈಗೊಂಡ ಮೊದಲ ಯಾತ್ರೆ ಇದಾಗಿದೆ. ಇದಕ್ಕೂ ಮೊದಲು ಅವರು ಹಲವಾರು ಬಾರಿ ಅಯ್ಯಪ್ಪನ ಸನ್ನಿಧಿಗೆ ಯಾತ್ರೆ ಕೈಗೊಂಡಿದ್ದಾರೆ. ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕರಾದ ಸುರೇಶ್ ಬಾಬು, ಮಾಜಿ ಮಂತ್ರಿಗಳಾದ ಸಿ.ಎಸ್. ಪುಟ್ಟರಾಜು, ಸಾ.ರಾ. ಮಹೇಶ್, ವಿಧಾನ ಪರಿಷತ್ ಸದಸ್ಯ ಭೋಜೇಗೌಡರು, ಶಾಸಕರಾದ ಶರಣಗೌಡ ಕಂದಕೂರ, ಮಾಜಿ ಶಾಸಕರಾದ ಮಾಗಡಿ ಮಂಜುನಾಥ್, ಹೆಚ್.ಎಂ. ರಮೇಶ್ ಗೌಡ ಸೇರಿದಂತೆ 30ಕ್ಕೂ ಹೆಚ್ಚು ಅಯ್ಯಪ್ಪ ಭಕ್ತರ ತಂಡದೊಂದಿಗೆ ಕೇಂದ್ರ ಸಚಿವರು ಯಾತ್ರೆ ಕೈಗೊಂಡಿದ್ದಾರೆ.

# ರಾಯಚೂರು ಜಿಲ್ಲೆಯಲ್ಲಿ ಬಸ್ ಸೌಲಭ್ಯ ಹೆಚ್ಚಳ ಮತ್ತು ಆನ್‌ಲೈನ್ ಟಿಕೆಟ್ ವ್ಯವಸ್ಥೆಗೆ AIM-IM ನಗರ ಅಧ್ಯಕ್ಷ ಶಬ್ಬೀರ್ ಅಹ್ಮದ್ ಹೌದೊಡ್ಡಿ ಆಗ್ರಹ

ನೈಜ್ಯ ದೆಸೆ ನ್ಯೂಸ್

ರಾಯಚೂರು: ರಾಯಚೂರು ಜಿಲ್ಲೆಯಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ಉದ್ದೇಶದಿಂದ ಹೆಚ್ಚುವರಿ ಬಸ್‌ಗಳ ಸಂಚಾರ, ಆನ್‌ಲೈನ್ ಟಿಕೆಟ್ ವ್ಯವಸ್ಥೆ ಹಾಗೂ ನ್ಯಾಯಾಲಯ ಮತ್ತು ವಿಧಾನ ಸೌಧಕ್ಕೆ ನೇರ ಸಿಟಿ ಬಸ್ ಸೌಲಭ್ಯ ಕಲ್ಪಿಸುವಂತೆ ಂಖಓ-ಖಓ ರಾಯಚೂರು ನಗರ ಅಧ್ಯಕ್ಷ ಶಬ್ಬೀರ್ ಅಹ್ಮದ್ ಹೌದೊಡ್ಡಿ ಅವರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜನಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಬಸ್‌ಗಳ ಕೊರತೆಯಿಂದ ವೃದ್ಧರು, ಮಹಿಳೆಯರು, ರೋಗಿಗಳು ಹಾಗೂ ಗ್ರಾಮೀಣ ಭಾಗದ ಶಾಲಾ-ಕಾಲೇಜು ವಿದ್ಯಾರ್ಥಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಸಮಯಕ್ಕೆ ಸರಿಯಾಗಿ ಬಸ್‌ಗಳು ಲಭ್ಯವಾಗದೇ ಇರುವುದರಿಂದ ವಿದ್ಯಾರ್ಥಿಗಳು ನಿಂತುಕೊಂಡೇ ಪ್ರಯಾಣಿಸುವ ಪರಿಸ್ಥಿತಿ



ನಿರ್ಮಾಣವಾಗಿದೆ. ಆದ್ದರಿಂದ ಪ್ರಯಾಣಿಕರ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಬಸ್‌ಗಳ ಸಂಚಾರ ವ್ಯವಸ್ಥೆ ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಪ್ರಸ್ತುತ ಬಸ್‌ಗಳಲ್ಲಿ ಟಿಕೆಟ್ ವಿತರಣೆಯ ಸಂದರ್ಭದಲ್ಲಿ ಚಿಲ್ಲರೆ ಹಣದ ಸಮಸ್ಯೆಯಿಂದ ಪ್ರಯಾಣಿಕರು ಹಾಗೂ ನಿರ್ವಾಹಕರ ನಡುವೆ ಗೊಂದಲಗಳು ಉಂಟಾಗುತ್ತಿವೆ. ಈ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಫೋನ್‌ಪೇ, ಗೂಗಲ್ ಪೇ ಸೇರಿದಂತೆ ಯುಪಿಐ ಆಧಾರಿತ ಆನ್‌ಲೈನ್ ಟಿಕೆಟ್ ವ್ಯವಸ್ಥೆಯನ್ನು ಜಾರಿಗೆ ತರಬೇಕು ಎಂದು ಆಗ್ರಹಿಸಲಾಗಿದೆ. ಇದಲ್ಲದೆ, ಇಕ್ಲಾಸ್‌ಪುರದಲ್ಲಿರುವ ವಿಧಾನ ಸೌಧ ಹಾಗೂ ದೇವದುರ್ಗ ನಗರದಲ್ಲಿರುವ ನೂತನ ನ್ಯಾಯಾಲಯಕ್ಕೆ ಸಾರ್ವಜನಿಕರು, ವಕೀಲರು ಮತ್ತು ಫಿರ್ಯಾದಿದಾರರು ಪ್ರತಿದಿನ ಸರ್ಕಾರಿ ಕೆಲಸಗಳಿಗಾಗಿ ಭೇಟಿ ನೀಡುತ್ತಿದ್ದು, ಸೂಕ್ತ ಸಾರಿಗೆ ವ್ಯವಸ್ಥೆಯ ಕೊರತೆಯಿಂದ ತೊಂದರೆ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ನ್ಯಾಯಾಲಯ ಮತ್ತು ವಿಧಾನ ಸೌಧದ ಆವರಣದವರೆಗೆ ನೇರ ಸಿಟಿ ಬಸ್ ಸೇವೆ ಆರಂಭಿಸಬೇಕೆಂದು ಮನವಿ ಮಾಡಲಾಗಿದೆ.

ಸಾರ್ವಜನಿಕರ ಹಿತದೃಷ್ಟಿಯಿಂದ ಸಂಬಂಧಿತ ಅಧಿಕಾರಿಗಳು ಮನವಿಯನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಶಬ್ಬೀರ್ ಅಹ್ಮದ್ ಹೌದೊಡ್ಡಿ ಅವರು ವಿನಂತಿಸಿದ್ದಾರೆ. ಈ ಮನವಿ ಪತ್ರದ ಪ್ರತಿಗಳನ್ನು ರಾಯಚೂರು ಜಿಲ್ಲಾಧಿಕಾರಿಗಳಿಗೆ, ರಾಯಚೂರು ಶಾಸಕ ಹಾಗೂ ದೇವದುರ್ಗ ಶಾಸಕ ಅವರಿಗೂ ಸಲ್ಲಿಸಲಾಗಿದೆ.

ಈ ಸಂದರ್ಭದಲ್ಲಿ ಂಖಓಖಓ ಮುಖಂಡ ಶಇಬಾಜ್ ಖಾನ್, ವಾರ್ಡ್ ಸಂಖ್ಯೆ 18ರ ಸಂತೋಷ್, ಈರಣ್ಣ, ಮೊಹಮ್ಮದ್ ಸಫಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ವರದಿ: ಖಾಜಾ ಹುಸೇನ್ ಬಾಬಾ ಜಾಲಹಳ್ಳಿ

# ಕಂಪ್ಲಿ ಗೋನಾಳು ಗ್ರಾಮದಲ್ಲಿ ಪ್ರಕಟಿತ ವಿಜಯನಗರ ಕಾಲದ ಶಾಸನ ಪತ್ತೆ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ತಾಲ್ಲೂಕಿನ ಗೋನಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಹತ್ತಿರ ಗ್ರಾಮಸ್ಥರು ಎರಡು ದಿನಗಳ ಹಿಂದೆ ಮುಳ್ಳು ಕಂಟಿಗಳನ್ನು ತೆರವುಗೊಳಿಸುವ ಸಮಯದಲ್ಲಿ ಮಣ್ಣಲ್ಲಿ ಹೂತು ಹೋಗಿದ್ದ ಶಾಸನ ಪತ್ತೆಯಾಗಿದೆ. 8 ಅಡಿ ಉದ್ದ, ಎರಡುವರೆ ಅಡಿ ಅಗಲದ ಈ ಕಲ್ಲಿನಲ್ಲಿ ಆರು ಸಾಲುಗಳನ್ನು ಬರೆಯಲಾಗಿದೆ ಹಾಗೂ ಕೆಲವು ಚಿತ್ರಗಳನ್ನು ಬಿಡಿಸಲಾಗಿದೆ.

ಈ ಶಾಸನವು 16ನೇ ಶತಮಾನದ ವಿಜಯನಗರ ಕಾಲಕ್ಕೆ ಸೇ-



ರಿದ್ದು ಎನ್ನಲಾಗಿದೆ. ಶಾಸನದಲ್ಲಿ ತ್ರಿಶೂಲ, ಈಶ್ವರ,ನಂದಿ,ಸೂರ್ಯ ಚಂದ್ರ ಚಿತ್ರಗಳಿವೆ. ಕೆಳಭಾಗದಲ್ಲಿ ಹಂಪಿ ವಿರೂಪಾಕ್ಷ ದೇವರಿಗೆ ಸೇರಿದ ಗುಣಹಾಳು(ಗೋನಾಳು) ಗ್ರಾಮವನ್ನು ದುರುಪಯೋಗ ಮಾಡಿಕೊಳ್ಳಬಾರದು ಎಂದು ಕೆತ್ತಲಾಗಿದೆ. ಕೆಳಗಡೆ ಗೋವಿನ ಚಿತ್ರವನ್ನು ರಚಿಸಿದ್ದು, ಬಹುತೇಕ ಅಳಿಸಿದ್ದು, ಸ್ವಲ್ಪ ಪ್ರಮಾಣದಲ್ಲಿ ಕಾಣಿಸುತ್ತದೆ. ಈ ಶಾಸನ ಪಠ್ಯ ಈಗಾಗಲೇ ಇನ್ ಸ್ಕ್ರಿಪ್ಷನ್ಸ್ ಆಫ್ ಬಳ್ಳಾರಿ ಡಿಸ್ಟ್ರಿಕ್ಟ್ ಎನ್ನುವ 1997ರ ಮೈಸೂರಿನ ಡೈರೆಕ್ಟೋರೇಟ್ ಆಫ್ ಆರ್ಕಿಯಾಲಜಿ ಆಂಡ್ ಮ್ಯೂಸಿಯಮ್ಸ್ ವ್ಯಾಲ್ಯೂಮನಲ್ಲಿ ದಾಖಲಾಗಿದೆ ಎಂದು ಕೊಪ್ಪಳ ಜಿಲ್ಲೆ ಹಿಟ್ನಾಳ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಉಪನ್ಯಾಸಕ ಜೀರಿಗನೂರು ಕೆ.ಆಂಜಿನೇಯ ತಿಳಿಸಿದರು.

ಗೋನಾಳು ಗ್ರಾಮವನ್ನು ಹಂಪಿ ವಿರೂಪಾಕ್ಷ ದೇವರಿಗೆ ದಾನವಾಗಿ ನೀಡಲಾಗಿದ್ದು,ಆದನ್ನು ಸೂಚಿಸುವ ನಾಮಫಲಕ ರೀತಿಯ ಶಾಸನ ಇದಾಗಿದೆ ಎಂದು ಗಂಗಾವತಿಯ ಇತಿಹಾಸ ಸಂಶೋಧಕ ಶರಣಬಸಪ್ಪ ಕೋಲ್ಕಾರ ವಿವರಿಸಿದರು. ಗ್ರಾಮದಲ್ಲಿ ಪತ್ತೆಯಾಗಿರುವ ಈ ಶಾಸನವನ್ನು ಅಧಿಕಾರಿಗಳು ಸಂರಕ್ಷಿಸಬೇಕು ಎಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.

# ಭಜನೆಗೆ ಸಕಾರಾತ್ಮಕ ಮನೋಭಾವ ವೃದ್ಧಿ :ವಾಗೀಶಾಚಾರ್

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಅಧಿಕ ಮಾಸದಲ್ಲಿ ಭಗವಂತನ ಭಜನೆ ಮಾಡುವುದ-ರಿಂದ ಸಕಾರಾತ್ಮಕ ಮನೋಭಾವನೆಯನ್ನು ವೃದ್ಧಿಗೊಳಿಸುತ್ತದೆ ಎಂದು ಗಂಗಾವತಿಯ ವಿಜಯಧ್ವಜ ವಿದ್ಯಾಪೀಠದ ಪ್ರಾಧ್ಯಾಪಕ ಪಂಡಿತ್ ವಾಗೀಶಾಚಾರ್ ಗೋರೆಬಾಳ ಹೇಳಿದರು.

ಕಂಪ್ಲಿ-ಕೋಟೆಯ ಶ್ರೀಪಟ್ಟಾಭಿರಾಮಚಂದ್ರದೇವರ ದೇವಸ್ಥಾನದಲ್ಲಿ ಅಧಿಕ ಮಾಸದ ಮಂಗಳೋತ್ಸವ ನಿಮಿತ್ತ ಹಮ್ಮಿಕೊಂಡಿದ್ದ ಭಜನಾ ಸಮಾರೋಪಕ್ಕೆ ಚಾಲನೆಯೊಂದಿಗೆ ಅಧಿಕ ಮಾಸ ಮಹಾತ್ಮೆ ಕುರಿತು ಉಪನ್ಯಾಸ ನೀಡಿ, ದಾನ ಧರ್ಮ




ಪುಣ್ಯ ಪರೋಪಕಾರ್ಯಗಳನ್ನು ಮಕ್ಕಳಿಗೆ ಹೇಳಿಕೊಡುವ ಅಗತ್ಯವಿದೆ. ಮನಸ್ಸನ್ನು ಭಗವಂತನದಲ್ಲಿ ಸ್ಥಿರವಾಗಿ ನಿಲ್ಲಿಸಲು ನಿತ್ಯ ಜಪ ತಪ, ಭಜನೆ, ಆರಾಧನೆಯಲ್ಲಿ ತೊಡಗಿಕೊಳ್ಳಬೇಕು ಎಂದರು.

ಕೋಟೆಯ ಶ್ರೀರಾಮ ಮಹಿಳಾ ಭಜನಾ ಮಂಡಳಿಯಿಂದ ಕಳೆದ 30ದಿನಗಳಿಂದ ಬ್ರಾಹ್ಮಣ ಸುವಾಸಿನಿಯರು ಹಮ್ಮಿಕೊಂಡಿದ್ದ ಭಜನೆಯನ್ನು ಮಂಗಳಗೊಳಿಸಲಾಯಿತು. ಈ ನಿಮಿತ್ತ ಶ್ರೀರಾಮದೇವರು, ಲಕ್ಷ್ಮಿ ನರಸಿಂಹ, ಪ್ರಾಣದೇವರು, ರುದ್ರದೇವರು, ರಾಯರ ಮೃತ್ತಿಕಾ ವೃಂದಾವನಗಳಿಗೆ ಸುಪ್ರಭಾತ, ವಿಶೇಷ ಪೂಜೆ, ಅಭಿಷೇಕ, ಅಲಂಕಾರ ಸೇವೆ ಸಲ್ಲಿಸಲಾಯಿತು. ಶ್ರೀರಾಮ ಮಹಿಳಾ ಭಜನಾ ಮಂಡಳಿಯ ಪ್ರಮುಖರಾದ ಸಾವಿತ್ರಿಬಾಯಿ ಜೋಷಿ, ರಮಾ ಪುರೋಹಿತ್, ವೇದಾ ಜೋಷಿ, ಚಂದ್ರಿಕಾ ಸಗರದ, ರಾಧಿಕ ಜೋಷಿ, ಜ್ಯೋತಿ ಗುಡಿ, ವಾಣಿ ಜೋಷಿ, ಲತಾ ರಾಮಾಯಣ, ರಚನಾ ಜೋಷಿ, ಸುಧಾ ವೈದ್ಯ, ಐಶ್ವರ್ಯ ಜೋಷಿ, ವರ್ಷಾವಿಕ್ರಮ್ ಸೇರಿದಂತೆ ಸದ್ಭಕ್ತರು ಪಾಲ್ಗೊಂಡಿದ್ದರು.

# ಅಭಿವೃದ್ಧಿ ಖಾತೆ ಹಗ್ಗಜಗ್ಗಾಟದ ನಡುವೆ ಜಯಂತಿ ಆಚರಣೆಗೆ ಬ್ರೇಕ್

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಬೆಂಗಳೂರು ಅಭಿವೃದ್ಧಿ ಖಾತೆಯ ಅಧಿಕಾರಗಳ ಕುರಿತು ಸ್ಪಷ್ಟತೆ ಸಿಗುವವರೆಗೆ ಜವಾಬ್ದಾರಿ ಸ್ವೀಕರಿಸುವುದಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ. "ನನಗೆ ಯಾವುದೇ ಅಸಮಾಧಾನ ಇಲ್ಲ. ಮುಖ್ಯಮಂತ್ರಿ ಹಾಗೂ ಪಕ್ಷವು ಬೆಂಗಳೂರಿನ ಅಭಿವೃದ್ಧಿಯಂತಹ ಮಹತ್ವದ ಜವಾಬ್ದಾರಿಯನ್ನು ನೀಡಿದ್ದಾರೆ. ಇದನ್ನು ಅಧಿಕಾರದ ಸ್ಥಾನವಾಗಿ ಅಲ್ಲ, ದೊಡ್ಡ ಹೊಣೆಗಾರಿಕೆಯಾಗಿ ನೋಡುತ್ತೇನೆ" ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಇದೀಗ ಸಚಿವರ ಈ ಹೇಳಿಕೆಯ ಬೆನ್ನಲ್ಲೇ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ವತಿಯಿಂದ ಆಯೋಜನೆಗೊಳ್ಳಬೇಕಿದ್ದ ನಾಡಪ್ರಭು ಕೆಂಪೇಗೌಡ ಜಯಂತಿ ಹಾಗೂ .ಅಂಬೇಡ್ಕರ್ ಜಯಂತಿ ಆಚರಣೆ ಮುಂದೂಡಿಕೆಯಾಗುವ



ಸಾಧ್ಯತೆ ಇದೆ ಎಂಬ ಮಾಹಿತಿ ಲಭ್ಯವಾಗಿದೆ. ಮೂಲಗಳ ಪ್ರಕಾರ, ಕಳೆದ ಶುಕ್ರವಾರ ಜಿಬಿಎ ಕೇಂದ್ರ ಕಚೇರಿಯಲ್ಲಿ ನಡೆದ ಸಭೆಯಲ್ಲಿ, ಬೆಂಗಳೂರು ನಗರ ಉಸ್ತುವಾರಿ ಸಚಿವರ ನೇಮಕವಾಗುವವರೆಗೆ ಯಾವುದೇ ಜಯಂತಿ ಕಾರ್ಯಕ್ರಮಗಳನ್ನು ಆಯೋಜಿಸದಿರುವ ಬಗ್ಗೆ ಚರ್ಚೆ ನಡೆದಿದೆ ಎನ್ನಲಾಗಿದೆ. ಉಸ್ತುವಾರಿ ಸಚಿವರ ಅನುಪಸ್ಥಿತಿಯಲ್ಲಿ ಅಧಿಕೃತ ಕಾರ್ಯಕ್ರಮ ನಡೆಸುವುದು ಸೂಕ್ತವಲ್ಲ ಎಂಬ ಅಭಿಪ್ರಾಯ ಅಧಿಕಾರಿಗಳ ವಲಯದಲ್ಲಿ ವ್ಯಕ್ತವಾಗಿದೆ.

ಇದೇ ಹಿನ್ನೆಲೆಯಲ್ಲಿ, ಜೂನ್ 18ರಂದು ನಡೆಯಬೇಕಿದ್ದ ಅಂಬೇಡ್ಕರ್ ಜಯಂತಿ ಹಾಗೂ ಜೂನ್ 27ರಂದು ನಿಗದಿಯಾಗಿದ್ದ ಕೆಂಪೇಗೌಡ ಜಯಂತಿ ಆಚರಣೆ ಮುಂದೂಡಿಕೆಯಾಗುವ ಸಾಧ್ಯತೆ ಇದೆ. ಜೊತೆಗೆ, ಕೆಂಪೇಗೌಡ ಪ್ರಶಸ್ತಿಗೆ ಅರ್ಹರ ಪಟ್ಟಿಯನ್ನು ಸಿದ್ಧಪಡಿಸಲು ಸಮಿತಿ ರಚಿಸುವ ಪ್ರಕ್ರಿಯೆಯನ್ನೂ ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ಸೂಚನೆ ನೀಡಲಾಗಿದೆ ಎನ್ನಲಾಗಿದೆ. ಬೆಂಗಳೂರು ನಗರ ಉಸ್ತುವಾರಿ ಸಚಿವರ ನೇಮಕ ಹಾಗೂ ಅಭಿವೃದ್ಧಿ ಖಾತೆಯ ಅಧಿಕಾರಗಳ ಕುರಿತು ಸ್ಪಷ್ಟತೆ ಸಿಗುವವರೆಗೆ ಯಾವುದೇ ಪ್ರಕ್ರಿಯೆ ಮುಂದುವರಿಸದಿರಲು ಸೂಚನೆ ನೀಡಲಾಗಿದೆ ಎಂದು ತಿಳಿದುಬಂದಿದೆ. ಇದರ ಪರಿಣಾಮವಾಗಿ ಈ ಬಾರಿಯ ಜಯಂತಿ ಆಚರಣೆಗಳು ವಿಳಂಬವಾಗುವ ಸಾಧ್ಯತೆ ಹೆಚ್ಚಾಗಿದೆ.

# ಜೂನ್ 22 ರಿಂದ ಸಿ ಮತ್ತು ಡಿ ಗ್ರೂಪ್ ನೌಕರರ ಅನಿರ್ಧಿಷ್ಟ ಮುಷ್ಕರ

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಸಿ ಮತ್ತು ಡಿ ಗ್ರೂಪ್ ನೌಕರರ ಶೋಷಣೆ ಮತ್ತು ಅನ್ಯಾಯದ ವಿರುದ್ಧ ಹೋರಾಟವನ್ನು ತೀವ್ರಗೊಳಿಸುವ ನಿಟ್ಟಿನಲ್ಲಿ 22 ಜೂನ್ ರಿಂದ ಅನಿರ್ಧಿಷ್ಟ ಮುಷ್ಕರ ಹಮ್ಮಿಕೊಳ್ಳಲು ನಿರ್ಧಾರಿಸಲಾಗಿದೆ ಎಂದು ಟಿಯುಸಿಐ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಆರ್.ಮಾನಸಯ್ಯ ಹೇಳಿದರು .

ಅವರಿಂದು ಪಟ್ಟಣದ ಅಂಬೇಡ್ಕರ್ ಭವನದಲ್ಲಿ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆ ಅಡಿಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಟಿಯುಸಿಐ ನೇತೃತ್ವದ ಸಿ ಮತ್ತು ಡಿ ಗ್ರೂಪ್ ನೌಕರರ ಸಂಘದ ಸಭೆಯ ನೇತೃತ್ವವಹಿಸಿ ಮಾತನಾಡಿದ ಅವರು, ಆರೋಗ್ಯ ಇಲಾಖೆಯಲ್ಲಿ ಸಿ ಮತ್ತು ಡಿ ಗ್ರೂಪ್ ನೌಕರರ ಶೋಷಣೆ ಮಿತಿಮೀರಿದೆ.



ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಡಿಯಲ್ಲಿ ದುಡಿಯುತ್ತಿರುವ 300ಕ್ಕೂ ಹೆಚ್ಚು ಹೊರಗುತ್ತಿಗೆ ಸಿ ಮತ್ತು ಡಿ ಗ್ರೂಪ್ ನೌಕರರ ಹಲವು ತಿಂಗಳ ವೇತನವನ್ನು ಹೊರಗುತ್ತಿಗೆ ಏಜೆನ್ಸಿಗಳಾದ ಮೇ?? ಎ ಆರ್ ಸಿ, ಮೇ॥ ಎಸ್ ಡಬ್ಲ್ಯೂ ಐ ಎಸ್ ಎಸ್, ಮೇ॥ ಪಾಪಲ್ಯೂರ್ ಇಂಜಿನಿಯರ್ಸ್ ಹಾಗೂ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳು ತಡೆಹಿಡಿದಿರುವುದು ತೀವ್ರ ಖಂಡನೀಯವಾಗಿದೆ.

ಕಾರ್ಮಿಕರ ದುಡಿಮೆಯ ಹಣವನ್ನು ಪಾವತಿಸದೆ ಶೋಷಣೆ ನಡೆಸಲಾಗುತ್ತಿದ್ದು, ಕಾರ್ಮಿಕರ ಭವಿಷ್ಯ ನಿಧಿಯಾದ ಇಪಿಎಫ್ ಹಾಗೂ ಸಾಮಾಜಿಕ ಭದ್ರತೆಯಾದ ಇಎಸ್‌ಐ ಹಣವನ್ನು ಸಹ ಸರಿಯಾಗಿ ಜಮೆ ಮಾಡದಿರುವ ಬಗ್ಗೆ ಗಂಭೀರ ಆರೋಪಗಳು ಕೇಳಿಬಂದಿವೆ. ಇಲಾಖೆಯ ಹೊರಗುತ್ತಿಗೆ ನೌಕರರು ಎದುರಿಸುತ್ತಿರುವ ಸಮಸ್ಯೆಗಳು ಕೇವಲ ವೇತನದ ಪ್ರಶ್ನೆಯಾಗಿಲ್ಲ; ಇದು ಕಾರ್ಮಿಕರ ಬದುಕು, ಗೌರವ ಮತ್ತು ಹಕ್ಕುಗಳ ಪ್ರಶ್ನೆಯಾಗಿದೆ ಎಂದು ಹೇಳಿದರು.

ಕಾರ್ಮಿಕರ ಶ್ರಮವನ್ನು ಲೂಟಿ ಮಾಡುತ್ತಿರುವ ಏಜೆನ್ಸಿಗಳು ಹಾಗೂ ಅಧಿಕಾರಿಗಳ ವಿರುದ್ಧ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು. ಬಾಕಿ ವೇತನ, ಇಪಿಎಫ್ ಹಾಗೂ ಇಎಸ್ ಐ ಪಾವತಿಸಿ ಕಾರ್ಮಿಕರಿಗೆ ನ್ಯಾಯ ಒದಗಿಸಬೇಕೆಂದು ಒತ್ತಾಯಿಸಿದರು. ಅಲ್ಲದೇ ಸಂಘದ ಪ್ರಮುಖ ಬೇಡಿಕೆಗಳಾದ ಆರೋಗ್ಯ ಇಲಾಖೆಯ ಹೊರಗುತ್ತಿಗೆ ಸಿ ಮತ್ತು ಡಿ ಗ್ರೂಪ್ ನೌಕರರ ಬಾಕಿ ವೇತನವನ್ನು ತಕ್ಷಣ ಪಾವತಿಸಬೇಕು. ಕಾರ್ಮಿಕರ ಇಪಿಎಫ್ ಹಾಗೂ ಇಎಸ್ ಐ ಹಣವನ್ನು ಸಂಪೂರ್ಣವಾಗಿ ಜಮೆ ಮಾಡಬೇಕು, ಕಾರ್ಮಿಕರ ವೇತನವನ್ನು ದುರುಪಯೋಗಪಡಿಸಿಕೊಂಡಿರುವ ಏಜೆನ್ಸಿಗಳು ಹಾಗೂ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕು, ಹೊರಗುತ್ತಿಗೆ ಕಾರ್ಮಿಕರ ಶೋಷಣೆಯನ್ನು ಕೊನೆಗೊಳಿಸಿ ಉದ್ಯೋಗ ಭದ್ರತೆ ಒದಗಿಸಬೇಕೆಂದು ಜೂನ್ 22 – 2026 ರಿಂದ ಅನಿರ್ಧಿಷ್ಟ ಮುಷ್ಕರ ನಡೆಸಲಾಗುವುದೆಂದು ತಿಳಿಸಿದರು. ಸಭೆಯ ಅಧ್ಯಕ್ಷತೆಯನ್ನು ಶಂಕ್ರಪ್ಪ ಗುಂಡ ಸಾಗರ ವಹಿಸಿದ್ದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಆಂಜನೇಯ ಅರಿಕೇರ, ದ್ಯಾಮಣ್ಣ ನಾಗರಾಳ, ಕಾರ್ಯದರ್ಶಿ ಅಂಬರೇಶ್ ಮೆದಿಕಿನಾಳ, ಖಜಾಂಚಿ ಜಗದೀಶ್ ಆನೆಹೊಸೂರ್, ಕಾರ್ಯಕಾರಿ ಮಂಡಳಿ ಸದಸ್ಯರಾದ ನಾಗಯ್ಯ ಅರಿಕೇರ, ದೇವರಾಜ್ ಬಲ್ಲಟಗಿ, ಮೌನೇಶ , ಬಂದೇನವಾಜ್ ಸಂತೆಕಲ್ಲೂರು, ಗದ್ದೆಪ್ಪ ಮಸ್ಕಿ ಸೇರಿದಂತೆ ಇತರರು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಐಟಿಐ ವೆಲ್ಡರ್

=ಐಟಿಐ ವೆಲ್ಡರ್ (ITI Welder) ಕೋರ್ಸ್ ಒಂದು ವರ್ಷದ ಅವಧಿಯ ತಾಂತ್ರಿಕ ಕೋರ್ಸ್ ಆಗಿದ್ದು, ಲೋಹಗಳನ್ನು ಜೋಡಿಸುವ (Welding) ಕೌಶಲ್ಯವನ್ನು ಕಲಿಸುತ್ತದೆ. ಇದು NCVT ಅಥವಾ SCVT ಮಾನ್ಯತೆ ಪಡೆದಿದ್ದು, ಕೈಗಾರಿಕೆಗಳಲ್ಲಿ ವೆಲ್ಡರ್ ಆಗಿ ಉದ್ಯೋಗಾವಕಾಶ ನೀಡುತ್ತದೆ. ವೆಲ್ಡರ್ ಕೋರ್ಸ್ ವಿವರಗಳು:ಕೋರ್ಸ್ ಅವಧಿ: 1 ವರ್ಷ (2 ಸೆಮಿಸ್ಟರ್‌ಗಳು). ಅರ್ಹತೆ: 8ನೇ ಅಥವಾ 10ನೇ ತರಗತಿ ಉತ್ತೀರ್ಣರಾಗಿರಬೇಕು (ಸಂಸ್ಥೆಗಳನ್ನು ಅವಲಂಬಿಸಿ).ವಯೋಮಿತಿ: ಸಾಮಾನ್ಯವಾಗಿ 14 ವರ್ಷ ಮೇಲ್ಪಟ್ಟವರು.ಕಲಿಯುವ ವಿಷಯಗಳು: ಗ್ಯಾಸ್ ವೆಲ್ಡಿಂಗ್, ಆರ್ಕ್ ವೆಲ್ಡಿಂಗ್, ಸುರಕ್ಷತಾ ನಿಯಮಗಳು, ಲೋಹಗಳ ಕತ್ತರಿಸುವಿಕೆ (Cutting), ಮತ್ತು ತಾಂತ್ರಿಕ ಚಿತ್ರಣ (Technical Drawing).ಉದ್ಯೋಗಾವಕಾಶಗಳು: ಉತ್ಪಾದನಾ ಘಟಕಗಳು, ವಾಹನ ಉದ್ಯಮ (Automotive), ಹಡಗು ನಿರ್ಮಾಣ, ನಿರ್ಮಾಣ ಕ್ಷೇತ್ರ (Construction), ಮತ್ತು ಸ್ವಯಂ ಉದ್ಯೋಗ.ಪ್ರವೇಶಾತಿ: ಸರ್ಕಾರಿ ಐಟಿಐಗಳಲ್ಲಿ ಕಡಿಮೆ ಶುಲ್ಕಕ್ಕೆ ಮತ್ತು ಖಾಸಗಿ ಐಟಿಐಗಳಲ್ಲಿ ನೇರ ಪ್ರವೇಶ ಪಡೆಯಬಹುದು. ಅಗತ್ಯ ದಾಖಲೆಗಳು:8ನೇ/10ನೇ ತರಗತಿ ಅಂಕಪಟ್ಟಿಆಧಾರ್ ಕಾರ್ಡ್ಜಾತಿ ಮತ್ತು ಆದಾಯ ಪ್ರಮಾಣಪತ್ರಫೋಟೋಗಳು ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸರ್ಕಾರದ ಐಟಿಐ ಇಲಾಖೆಯ ಅಧಿಕೃತ ವೆಬ್‌ಸೈಟ್ ಅಥವಾ ಹತ್ತಿರದ ಸರ್ಕಾರಿ ಐಟಿಐಗೆ ಭೇಟಿ ನೀಡಿ.

# ಶಿವಪುತ್ರ ಗಾಣದಾಳ್ ಹುಟ್ಟುಹಬ್ಬದ ಪ್ರಯುಕ್ತ ಹಣ್ಣು ಹಂಪಲು ವಿತರಣೆ

❑ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಕರುನಾಡ ವಿಜಯಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಉತ್ತರ ಕರ್ನಾಟಕ ಉಸ್ತುವಾರಿ ಶಿವಪುತ್ರ ಗಾಣದಾಳ್ ಹುಟ್ಟುಹಬ್ಬದ ಪ್ರಯುಕ್ತ ಸರಕಾರಿ ಸಾರ್ವಜನಿಕ ಆಸ್ಪತ್ರೆ ಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ಹಂಚುವ ಮೂಲಕ ಹುಟ್ಟುಹಬ್ಬ ಆಚರಿಸಿ ನಂತರ ಮಾತನಾಡಿದ ಕರುನಾಡ ವಿಜಯ ಸೇನೆಯ ತಾಲೂಕ ಅಧ್ಯಕ್ಷ ಹನುಮಂತ ಬಡಿಗೇರ್ ಆ ತಾಯಿ ಭುವನೇಶ್ವರಿ ಆರೋಗ್ಯ ಆಯಸ್ಸು ಸುಖ ಶಾಂತಿ ಸಂಪತ್ತು ನೀಡಲಿ ವಿಜಯಸೇನೆ ಸಂಘಟನೆಯಯಲ್ಲಿ ರಾಜ-




ಕೀಯಲ್ಲಿ ಇನ್ನೂ ಹೆಚ್ಚು ಹೆಚ್ಚು ಉನ್ನತ ಮಟ್ಟಕ್ಕೆ ಬೆಳೆಯಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ರಂಗಪ್ಪ ಭೊವಿ, ದುರಗಪ್ಪ ಪೂಜಾರಿ, ಸಂಗನಗೌಡ ಪಾಟೀಲ್, ತಿರುಪತಿ ಭಜಂತ್ರಿ, ಪರಶುರಾಮ ಗೋರೇಬಾಳ, ಪರಶುರಾಮ ಭಜಂತ್ರಿ, ಡಾ, ಚಂದ್ರಶೇಖರ ಸರ್ಜಾಪೂರ, ಬಸವರಾಜ ರತ್ತಾಳ, ಮೌನೇಶ ರಾಂಪೂರ, ಹನುಮಂತ ರಾಂಪೂರ, ರಾಮು ಮಿಂಚೇರಿ, ಬಸವರಾಜ ಮೇರಾಖೋರೊ, ಶಿವು ತೋಟದ್, ಅಂದಪ್ಪ ನಾಯಕ, ಸುರೇಶ ಮುದಗಲ್, ಕನಕಪ್ಪ ನಾಯಕ, ಬಸವರಾಜ ಮಡಿವಾಳ, ರವಿ ನಾಯಕ, ಶೇಖರಗೌಡ ರಾಮತ್ನಾಳ,ಸಂಗನಗೌಡ ಪೋ.ಪಾಟೀಲ್, ಬಾಲನಗೌಡ ಆರ್ಯ ಬೋಗಾಪೂರ, ಹಾಗೂ ವಿಜಯಸೇನೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಮಸ್ಕಿ ಬ್ಲಾಕ್ ಕಾಂಗ್ರೆಸ್ ಪಕ್ಷದಿಂದ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರ ಭಾವಚಿತ್ರ ಹಾಕದೇ ಶಿಷ್ಟಚಾರ ಉಲ್ಲಂಘನೆ: ಭೀಮರಾಯ ಆರೋಪ




❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಮಸ್ಕಿ ಬ್ಲಾಕ್ ಕಾಂಗ್ರೆಸ್‌ವತಿಯಿಂದ ಇತ್ತಿಚೆಗೆ ನಡೆದ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ತರಬೇತಿ ಕಾರ್ಯಗಾರ ಕಾರ್ಯಕ್ರಮ ಬ್ಯಾನರ್‌ನಲ್ಲಿ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ ಅವರ ಭಾವಚಿತ್ರ ಹಾಕದೇ ಶಿಷ್ಟಚಾರ ಉಲ್ಲಂಘನೆ ಮಾಡಿದ್ದಾರೆಂದು ಕಾಂಗ್ರೆಸ್ ನಗರ ಎಸ್.ಸಿ ಘಟಕದ ಉಪಾಧ್ಯಕ್ಷ ಭೀಮರಾಯ ಆರೋಪಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಲಿತ ಉಪಮುಖ್ಯಮಂತ್ರಿ ಎಂಬ ಕಾರಣಕ್ಕೆ ಬ್ಯಾನರ್‌ನಲ್ಲಿ ಫೋಟೋ ಹಾಕದೇ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ್ ಯದ್ದಲದಿನ್ನಿ ಮತ್ತು ಗ್ರಾಮೀಣ ಘಟಕದ ಅಧ್ಯಕ್ಷ ಹನುಮಂತಪ್ಪ ಮುದ್ದಾಪೂರು ದಲಿತ ಸಮಾಜಕ್ಕೆ ಅಪಮಾನ ಮಾಡಿದ್ದಾರೆಂದು ಆರೋಪಿಸಿದರು. ಕಾಂಗ್ರೆಸ್ ಪಕ್ಷದಿಂದ ಪಟ್ಟಣದಲ್ಲಿ ನಡೆಯುವ ಬಹುತೇಕ ಕಾರ್ಯಕ್ರಮಗಳಲ್ಲಿ ದಲಿತ ಸಮಾಜಕ್ಕೆ ಮತ್ತು ಮುಖಂಡರಿಗೆ ಅಪಮಾನ ಮಾಡುವಂತಹ ಘಟನೆಗಳನ್ನು ಜರುಗುತ್ತಾ ಬಂದಿವೆ.

ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ನಡೆಯದಂತೆ ಶಾಸಕರು ಮತ್ತು ಪಕ್ಷದ ಅಧ್ಯಕ್ಷರುಗಳು ಗಮನಹರಿಸಬೇಕು. ಇಲ್ಲದೇ ಹೋದರೆ ಮುಂದಿನ ದಿನಮಾನಗಳಲ್ಲಿ ಪಕ್ಷಕ್ಕೆ ದಲಿತ ಸಮಾಜದಿಂದ ತಕ್ಕಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಯಮನಪ್ಪ ತಳವಾರ, ಹುಲಗಪ್ಪ ಹಸಮಕಲ್, ರಮೇಶ ಇದ್ದರು.

## ಅಂಬಾಮಠದ ಕಾಮಗಾರಿಗಳನ್ನು ವೀಕ್ಷಿಸಿದ ಶಾಸಕ ಹಂಪನಗೌಡ ಬಾದರ್ಲಿ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಮಾನ್ಯ ಸಿಂಧನೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಹಂಪನಗೌಡ ಬಾದರ್ಲಿ ಸಾಹೇಬರು ಇಂದು ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಅಂಬಾಮಠಕ್ಕೆ ಭೇಟಿ ನೀಡಿ, ಜಗನ್ಮಾತೆಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.



ತಾಯಿಯ ಆಶೀರ್ವಾದ ಪಡೆದ ಬಳಿಕ ಅವರು ಕ್ಷೇತ್ರದಲ್ಲಿ ಪ್ರಗತಿಯಲ್ಲಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, "ಅಂಬಾದೇವಿಯ ಆಶೀರ್ವಾದದೊಂದಿಗೆ ಸಿಂಧನೂರು ಕ್ಷೇತ್ರವು ಅಭಿವೃದ್ಧಿಯ ಪಥದಲ್ಲಿ ಮತ್ತೊಂದು ಹೆಜ್ಜೆ ಇಡುತ್ತಿದೆ. ಧಾರ್ಮಿಕ ಕ್ಷೇತ್ರಗಳಿಗೆ ಬರುವ ಭಕ್ತಾದಿಗಳಿಗೆ ಯಾವುದೇ ಲೋಪವಾಗದಂತೆ ಉತ್ತಮ ಮೂಲಸೌಕರ್ಯಗಳನ್ನು ಒದಗಿಸುವುದು ಮತ್ತು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ," ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪ್ರಮುಖ ಮುಖಂಡರಾದ ರಾಜುಗೌಡ, ಆರ್. ಸಿ. ಪಾಟೀಲ್, ತಹಸೀಲ್ದಾರ್ ಅರುಣ್ ದೇಸಾಯಿ, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸ್ಥಳೀಯ ಸಾರ್ವಜನಿಕರು ಮತ್ತು ಭಕ್ತಾದಿಗಳು ಉಪಸ್ಥಿತರಿದ್ದರು.

# ಬಾವಿಗೆ ಬಿದ್ದ ವಾಹನ : 8 ಮಂದಿ ದುರ್ಮರಣ

❑ ನೈಜ್ಯ ದೆಸೆ ನ್ಯೂಸ್

**ಮುಂಬೈ: ಚಾಲಕನ ನಿಯಂತ್ರಣ ತಪ್ಪಿ ಪಿಕ್ ಅಪ್ ವಾಹನವೊಂದು ರಸ್ತೆ ಬದಿಯ ತೆರೆದ ಬಾವಿಗೆ ಬಿದ್ದ ಪರಿಣಾಮ ನಾಲ್ವರು ಮಹಿಳೆಯರು ಮತ್ತು ನಾಲ್ವರು ಮಕ್ಕಳು ಸೇರಿ ಎಂಟು ಮಂದಿ ಮೃತಪಟ್ಟಿರುವ ಘಟನೆ ಮಹಾರಾಷ್ಟ್ರದ ಸೋಲಾಪುರ ಜಿಲ್ಲೆಯ ಮಲ್ಶಿರಾಸ್ ತಹಸಿಲ್‌ನಲ್ಲಿ ನಡೆದಿದೆ. ಘಟನೆಯಲ್ಲಿ ಏಳು ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.**

ಪಂಡರಾಪುರ ಮೂಲದ 15 ಜನರು ಮಾಸ್ವಾಡ್‌ನ ದೇವಸ್ಥಾನಕ್ಕೆ ಭೇಟಿ ನೀಡಿ ಹಿಂತಿ-ರುಗುತ್ತಿದ್ದರು. ಈ ವೇಳೆ ತಂಡುಲ್ವಾಡಿ ಗ್ರಾಮದ ಬಳಿ ಈ ಅಪಘಾತ ಸಂಭವಿಸಿದೆ. ಪಿಕಪ್‌ನಲ್ಲಿ



ಇದ್ದವರು ಹೆಚ್ಚಿನವರು ಸಂಬಂಧಿಕರು ಮತ್ತು ನೆರೆಹೊರೆಯವರು ಎಂದು ತಿಳಿದುಬಂದಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ, 15 ಜನರನ್ನು ಹೊತ್ತೊಯ್ಯುತ್ತಿದ್ದ ಪಿಕ್-ಅಪ್ ವಾಹನವು ಭಾನುವಾರ ಸಂಜೆ 5 ಗಂಟೆ ಸುಮಾರಿಗೆ ಚಾಲಕನ ನಿಯಂತ್ರಣ ತಪ್ಪಿ, ರಸ್ತೆಬದಿಯ ಜಮೀನಿಗೆ ನುಗ್ಗಿ ಬಾವಿಗೆ ಬಿದ್ದಿದೆ. ಇದ-ರಿಂದಾಗಿ 8 ಮಂದಿ ಸಾವನ್ನಪ್ಪಿದ್ದಾರೆ. ಸದ್ಯ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಸೋಲಾಪುರದ ಪೊಲೀಸ್ ವ-ರಿಷ್ಠಾಧಿಕಾರಿ ಅತುಲ್ ಕುಲಕರ್ಣಿ ತಿಳಿಸಿದ್ದಾರೆ.

ಅಪಘಾತದಲ್ಲಿ ಮೃತಪಟ್ಟವರಿಗೆ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಸಂತಾಪ ಸೂಚಿಸಿದ್ದಾರೆ. ಮೃತರ ಕುಟುಂಬಸ್ಥರಿಗೆ 5 ಲಕ್ಷ ರೂ. ಪರಿಹಾರ ಘೋಷಿಸಿದ್ದಾರೆ.ಸೋಲಾಪುರ ಜಿಲ್ಲಾಧಿಕಾರಿ ಮತ್ತು ಪೊಲೀಸ್ ವ-ರಿಷ್ಠಾಧಿಕಾರಿ ಅಪಘಾತ ನಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಇಂದು ಕೈ ಶಾಸಕರು ರೆಸಾರ್ಟ್‌ಗೆ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ವಿಧಾನ ಪರಿಷತ್ತಿನ 7 ಸ್ಥಾನಗಳಿಗೆ ಜೂ. 18 ಗುರುವಾರದಂದು ನಡೆಯುವ ಚುನಾವಣೆಯಲ್ಲಿ ಯಾವುದೇ ಅಡ್ಡ ಮತದಾನಕ್ಕೆ ಅವಕಾಶ ಇಲ್ಲದಂತೆ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವು ಸುಗಮವಾಗುವಂತೆ ನೋಡಿಕೊಳ್ಳಲು ಎಲ್ಲ ಕಾಂಗ್ರೆಸ್ ಶಾಸಕರನ್ನು ನಾಳೆ ರೆಸಾರ್ಟ್‌ಗೆ ಕರೆದೊಯ್ಯಲಾಗುತ್ತಿದೆ.**

ವಿಧಾನ ಪರಿಷತ್ತಿನ ಚುನಾವಣೆ ಹಿನ್ನೆಲೆಯಲ್ಲಿ ನಾಳೆ ಸಂಜೆ 6 ಗಂಟೆಗೆ ಬಿಡದಿ ಬಳಿಯ ಖಾಸಗಿ ರೆಸಾರ್ಟ್‌ನಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಈ ಸಭೆಯಲ್ಲಿ ಪಾಲ್ಗೊಳ್ಳುವ ಕಾಂಗ್ರೆಸ್ ಶಾಸಕರು ಮಂಗಳವಾರ ಮತ್ತು ಬುಧವಾರ ಎರಡು ದಿನ ರೆಸಾರ್ಟ್‌ನಲ್ಲೇ ವಾಸ್ತವ್ಯ ಹೂಡಿ ಗುರುವಾರ ಅಲ್ಲಿಂದಲೇ ನೇರವಾಗಿ ವಿಧಾನಸೌಧಕ್ಕೆ ಮತ ಹಾಕಲು ಬರುವರು. ವಿಧಾನ ಪರಿಷತ್ತಿನ 7 ಸ್ಥಾನಗಳಿಗೆ 8 ಅಭ್ಯರ್ಥಿಗಳು ಕಣದಲ್ಲಿರುವುದರಿಂದ ಕಾಂಗ್ರೆಸ್ ಪಕ್ಷ ತನ್ನ ಐವರು ಅಭ್ಯರ್ಥಿಗಳನ್ನು ಗೆಲ್ಲಿಸಿಕೊಳ್ಳಲು ರಣತಂತ್ರ ರೂಪಿಸಿದ್ದು, ಅದರಂತೆ ಕಾಂಗ್ರೆಸ್ ಶಾಸಕರ ಮತಗಳು ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮಾತ್ರ ಚಲಾಯಿಸಲು ಏನೆಲ್ಲಾ ಮಾಡಬೇಕೋ ಅದನ್ನೆಲ್ಲಾ ಈಗಾಗಲೇ ಮಾಡಲಾಗಿದೆ. ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾದ ನಂತರ ಅವರ ಅಧ್ಯಕ್ಷತೆಯಲ್ಲಿ ಕಾಂಗ್ರೆಸ್‌ನ ಮೊದಲ ಶಾಸಕಾಂಗ ಪಕ್ಷದ ಸಭೆ ನಾಳೆ ನಡೆಯುತ್ತಿದ್ದು, ಈ ಸಭೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರುಗಳು ಹಾಗೂ ಪಕ್ಷದ ಎಲ್ಲಾ ಕಾರ್ಯಾಧ್ಯಕ್ಷರು ಪಾಲ್ಗೊಳ್ಳಲಿದ್ದು, ಈ ಸಭೆಗೆ ಬರುವಂತೆ ಕಾಂಗ್ರೆಸ್‌ನ ಎಲ್ಲಾ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಸದಸ್ಯರುಗಳಿಗೆ ಸೂಚನೆಯನ್ನು ರವಾನಿಸಲಾಗಿದೆ. ನಾಳಿನ ಸಭೆಯಲ್ಲಿ ವಿಧಾನ ಪರಿಷತ್ತಿನ ಚುನಾವಣೆಯಲ್ಲಿ ಯಾವ ರೀತಿ ಮತ ಚಲಾಯಿಸಬೇಕು, ಯಾವ ಶಾಸಕರು ಕಾಂಗ್ರೆಸ್‌ನ ಯಾವ ಅಭ್ಯರ್ಥಿಗೆ ಮತ ಹಾಕಬೇಕು ಎಂಬೆಲ್ಲಾ ಬಗ್ಗೆ ಶಾಸಕರುಗಳಿಗೆ ಸೂಚನೆ ನೀಡಲಾಗುತ್ತದೆ. ವಿಧಾನ ಪರಿಷತ್ತಿನ ಚುನಾವಣೆಯಲ್ಲಿ ಮೊದಲ ಮತ್ತು ದ್ವಿತೀಯ ಪ್ರಾಶಸ್ತ್ಯದ ಮತ ಚಲಾಯಿಸಲು ಅವಕಾಶವಿದ್ದು, ಮೊದಲ ಪ್ರಾಶಸ್ತ್ಯದ ಮತವನ್ನು ಪಕ್ಷ ಸೂಚಿಸಿದ ಅಭ್ಯರ್ಥಿಗಳಿಗೆ ಹಾಕುವ ಶಾಸಕರುಗಳು ಎರಡನೇ ಪ್ರಾಶಸ್ತ್ಯದ ಮತವನ್ನು ಯಾವ ಕಾಂಗ್ರೆಸ್ ಅಭ್ಯರ್ಥಿಗೆ ಹಾಕಬೇಕು ಎಂಬುದನ್ನು ನಾಳಿನ ಶಾಸಕಾಂಗ ಪಕ್ಷದ ಸಭೆಯಲ್ಲಿ ಎಲ್ಲಾ ಶಾಸಕರಿಗೂ ತಿಳಿಸಲಾಗುತ್ತದೆ.

ಈ ಚುನಾವಣೆಯಲ್ಲಿ ಜೆಡಿಎಸ್ ಪಕ್ಷ 8ನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿರುವುದರಿಂದ ಕಾಂಗ್ರೆಸ್ ಪಕ್ಷದಿಂದ ಯಾರೂ ಅಡ್ಡ ಮತದಾನ ಮಾಡದಂತೆ ಕಟ್ಟೆಚ್ಚರ ವಹಿಸಲಾಗಿದ್ದು, ಈ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಸೂಚನೆಯನ್ನು ಎಐಸಿಸಿ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರು ಶಾಸಕರುಗಳಿಗೆ ನೀಡುವರು ಎಂದು ಹೇಳಲಾಗಿದೆ. ವಿಧಾನ ಪರಿಷತ್ತಿನ 7 ಸ್ಥಾನಗಳ ಪೈಕಿ 5 ಸ್ಥಾನಗಳಿಗೆ ಕಾಂಗ್ರೆಸ್ ಪಕ್ಷ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಎಐಸಿಸಿ ಕಾರ್ಯದರ್ಶಿ ಪಿ.ವಿ. ಮೋಹನ್, ತಿಪ್ಪಣ್ಣ ಕಮಕನೂರು, ಮಳವಳ್ಳಿ ಶಿವಣ್ಣ ಹಾಗೂ ವಿನಯ್ ಕಾರ್ತಿಕ್ ಇವರುಗಳನ್ನು ಅಭ್ಯರ್ಥಿಯಾಗಿ ಕಣಕ್ಕಿಳಿಸಿದೆ.

ಪ್ರತಿ ಅಭ್ಯರ್ಥಿಯ ಗೆಲುವಿಗೆ 28 ಶಾಸಕರ ಮತ ಅಗತ್ಯವಿದ್ದು, ಕಾಂಗ್ರೆಸ್ ಪಕ್ಷ ತನ್ನ 136 ಶಾಸಕರ ಜತೆಗೆ ಪಕ್ಷೇತರ ಶಾಸಕರುಗಳಾದ ದರ್ಶನ್ ಪುಟ್ಟಣ್ಣಯ್ಯ ಹಾಗೂ ಲತಾ ಮಲ್ಲಿಕಾರ್ಜುನ್ ಇವರುಗಳ ಬೆಂಬಲವನ್ನು ಪಡೆದಿದ್ದು, ಇವರ ಜತೆಗೆ ಬಿಜೆಪಿಯಿಂದ ಉಚ್ಚಾಟಿತರಾಗಿರುವ ಶಾಸಕರಾದ ಎಸ್.ಟಿ. ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್ ಇವರುಗಳ ಬೆಂಬಲವನ್ನು ಪಡೆಯುವ ಸಾಧ್ಯತೆಗಳಿದೆ. ಈ ಲೆಕ್ಕಾಚಾರದ ಪ್ರಕಾರ ಕಾಂಗ್ರೆಸ್‌ನ ಐವರು ಅಭ್ಯರ್ಥಿಗಳು ಗೆಲ್ಲಲು ಯಾವುದೇ ತೊಂದರೆ ಇಲ್ಲ. ವಿಧಾನ ಪರಿಷತ್ತಿನ ಚುನಾವಣೆ ಗೌಪ್ಯ ಮತದಾನವಾಗಿರುವುದ ರಿಂದ ಯಾರಾದರೂ ಅಡ್ಡಮತದಾನ ಮಾಡಬಹುದು ಎಂಬ ಭೀತಿಯೂ ಇದ್ದು, ಅದಕ್ಕೆ ಅವಕಾಶ ಕೊಡದಂತೆ ಕಾಂಗ್ರೆಸ್ ಶಾಸಕರನ್ನು ಮತದಾನದವರೆಗೂ ರೆಸಾರ್ಟ್‌ನಲ್ಲಿ ಇರಿಸುವ ತಂತ್ರಗಾರಿಕೆಯನ್ನು ಮಾಡಲಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಹತ್ತಿ ನಾಟಿ ಯಂತ್ರದಿಂದ ದುಬಾರಿ ಕೂಲಿಕಾರರ ಸಮಸ್ಯೆ ತಪ್ಪಿಸಿ: ಪ್ರಕಾಶ್ ಚೌಹಾಣ್

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜೂನ್ 15 (ಕರ್ನಾಟಕ ವಾರ್ತೆ): ಹತ್ತಿ ನಾಟಿ ಯಂತ್ರಗಳು ಹತ್ತಿ ಬೀಜಗಳನ್ನು ನಿಖರವಾದ ಆಳ ಮತ್ತು ಸಾಲುಗಳಲ್ಲಿ ಬಿತ್ತನೆ ಮಾಡಲು ಬಳಸುವ ಅತ್ಯುತ್ತಮ ಕೃಷಿ ಸಾಧನಗಳಾಗಿವೆ. ಇವು ದುಬಾರಿ ಕೂಲಿಕಾರರ ಸಮಸ್ಯೆಯನ್ನು ತಪ್ಪಿಸಿ, ಬೀಜದಿಂದ ಬೀಜಕ್ಕೆ ಹಾಗೂ ಸಾಲಿನಿಂದ ಸಾಲಿಗೆ ಸರಿಯಾದ ಅಂತರವನ್ನು ಕಾಯ್ದುಕೊಳ್ಳಲು ನೆರವಾಗುತ್ತವೆ ಎಂದರು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌಹಾಣ್ ಅವರು ಹೇಳಿದರು.**

ಜೂನ್ 15ರ ಸೋಮವಾರ ದಂದು ರಾಯಚೂರು ತಾಲೂಕಿನ ಮಿಟಿಮಲ್ಕಾಪುರ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಹತ್ತಿ ಉತ್ಪಾದಕತೆ




ಮಿಷನ್ ಯೋಜನೆಯ ಕ್ಷೇತ್ರ ಪ್ರಾತ್ಯಕ್ಷಿಕೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಕೇಂದ್ರ ಸರ್ಕಾರವು 5,659 ಕೋಟಿ ರೂ. ವೆಚ್ಚದಲ್ಲಿ ಹತ್ತಿ ಉತ್ಪಾದಕತೆ ಮಿಷನ್ ಯೋಜನೆಯನ್ನು ಜಾರಿಗೊಳಿಸಿದೆ. ಯೋಜನೆಯು 2026ರಿಂದ 31ರವರೆಗೆ ಮಹತ್ವಾಕಾಂಕ್ಷೆಯ ಯೋಜನೆಯು ಹತ್ತಿ ಇಳುವರಿ ಹೆಚ್ಚಿಸಲು ಮತ್ತು ರೈತರ ಆದಾಯವನ್ನು ವೃದ್ಧಿಸಲು ವೈಜ್ಞಾನಿಕ ಹಾಗೂ ತಾಂತ್ರಿಕ ಬೆಂಬಲವನ್ನು ಒದಗಿಸುತ್ತದೆ ಎಂದರು.

2031ರ ವೇಳೆಗೆ ಹತ್ತಿ ಉತ್ಪಾದಕತೆಯನ್ನು ಪ್ರತಿ ಹೆಕ್ಟೇರ್‌ಗೆ 440 ಕೆ.ಜಿ ಯಿಂದ 755 ಕೆ.ಜಿ.ಗೆ ಹೆಚ್ಚಿಸುವುದು.ಹೆಚ್ಚಿನ ಇಳುವರಿ ನೀಡುವ,ಹವಾಮಾನ ವೈಪರೀತ್ಯ ಮತ್ತು ಕೀಟಗಳನ್ನು ತಡೆದುಕೊಳ್ಳ ಬಲ್ಲ ಬೀಜಗಳ ಅಭಿವೃದ್ಧಿ, ದಾರಗಳು ಉದ್ದವಾಗಿರುವ ಮತ್ತು ಬಲವಾಗಿರುವ ಹತ್ತಿ ಉತ್ಪಾದನೆಗೆ ಹೆಚ್ಚಿನ ಒತ್ತು ನೀಡುವ ಮೂಲಕ ದೇಶದ 14 ರಾಜ್ಯಗಳ 140 ಜಿಲ್ಲೆಗಳ ಸುಮಾರು 32 ಲಕ್ಷ ರೈತರಿಗೆ ತರಬೇತಿ ಮತ್ತು ಆಧುನಿಕ ಕೃಷಿ ತಂತ್ರಜ್ಞಾನಗಳ ಮೂಲಕ ನೆರವು ನೀಡಲಾಗುತ್ತದೆ ಎಂದರು. ಹತ್ತಿ ಬೆಳೆಯ ಉತ್ಪಾದನೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಮಿಷನ್ ಹತ್ತಿ ಯೋಜನೆಯನ್ನು 2026–27 ಸಾಲಿನಲ್ಲಿ ಜಾರಿಗೊಳಿಸಲಾಗಿದೆ.

ಈ ಯೋಜನೆಯಡಿ ಹತ್ತಿ ಬೆಳೆಯನ್ನು ಅಧಿಕ ಸಾಂದ್ರತೆ ಪದ್ಧತಿಯಲ್ಲಿ ನಾಟಿ ಮಾಡಬೇಕು. ಸಾಲಿನಿಂದ ಸಾಲಿಗೆ 90 ಸೇ.ಮಿ ಅಂತರ ಗಿಡ ದಿಂದ ಗಿಡ್ಡಕ್ಕೆ 15 ಸೇ.ಮಿ ಅಂತರ ಕಾಪಾಡಬೇಕು. ಈ ಅಂತರ ಮಟ್ಟವನ್ನು ಅತ್ಯಂತ ನಿಖರತೆಯಿಂದ ನಾಟಿ ಮಾಡುವಲ್ಲಿ ಈ ಹೊಸ ಉಪಕರಣ ವಾದ ವಾಯು ಚಾಲಿತ ಬಿತ್ತನೆ ಯಂತ್ರದ ಮೂಲಕ ನಾಟಿ ಮಾಡಬಹುದಾಗಿದೆ ಎಂದರು. ಇದೇ ಸಂದರ್ಭದಲ್ಲಿ ರಾಯಚೂರು ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕಿ ದೀಪ ಎಲ್., ಕೃಷಿ ವಿಜ್ಞಾನಿ ಡಾ.ಭೀಮಣ್ಣ, ಐಎಟಿ ಸಂಸ್ಥೆಯ ಆರ್.ಎ.ಪಾಟೀಲ್, ಪ್ರಗತಿ ಪರ ರೈತ ಸಿದ್ದನಗೌಡ ಸೇರಿದಂತೆ ಕೃಷಿ ಅಧಿಕಾ-ರಿಗಳು, ಸಿಬ್ಬಂದಿಗಳು ಮತ್ತು ರೈತರು ಇದ್ದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101